ಬುಧವಾರ, 17.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 115
Digital Varthe Kannada Daily
Volume 01 - Issue 115
Wednesday 17.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ

ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಕೆ.ಶಿವರಾಮ್ ಹುಟ್ಟು ಹಬ್ಬದ ಅಂಗವಾಗಿ ಸರ್ಕಾರಿ ಆಸ್ಪತ್ರೆಯ ರೋಗಿಗಳಿಗೆ ಹಣ್ಣು-ಹಂಪಲು ವಿತರಣೆ



ತಾ ಲ್ಲೂಕು ಛಲವಾದಿ ಮಹಾಸಭಾ ಘಟಕದ ವತಿಯಿಂದ ಐ.ಎ.ಎಸ್.ಅಧಿಕಾರಿಯಾಗಿ ಜಿಲ್ಲಾಧಿಕಾರಿಯಾಗಿ ವಿವಿಧ ಕಡೆ ಉತ್ತಮ ಸೇವೆ ಸಲ್ಲಿಸುವ ಮೂಲಕ ಒಳ್ಳೆಯ ಹೆಸರು ಪಡೆದಿದ್ದ ಕೆ.ಶಿವರಾಮ್ ಅವರ ಹುಟ್ಟು ಹಬ್ಬದ ಅಂಗವಾಗಿ ಪಟ್ಟಣದ ಸರ್ಕಾರಿ ಆಸ್ಪತ್ರೆಯ ಎಲ್ಲಾ ರೋಗಿಗಳಿಗೆ ಹಣ್ಣು-ಹಂಪಲು ವಿತರಣೆ ಮಾಡಲಾಯಿತು

ಛಲವಾದಿ ಮಹಾಸಭಾ ರಾಜ್ಯ ಸಮಿತಿ ಸದಸ್ಯರು ಹಾಗೂ ಪುರಸಭಾ ಸದಸ್ಯರಾದ ಡಿ.ಪ್ರೇಮಕುಮಾರ್ ಮತ್ತು ತಾಲ್ಲೂಕು ಛಲವಾದಿ ಮಹಾಸಭಾ ಘಟಕದ ಅಧ್ಯಕ್ಷ ಊಚನಹಳ್ಳಿ ನಟರಾಜ್ ಅವರುಗಳ ನೇತೃತ್ವದಲ್ಲಿ ಪಟ್ಟಣದ ದುಂಡಶೆಟ್ಟಿ-ಲಕ್ಷ್ಮಮ್ಮ ಸ್ಮಾರಕ ತಾಲ್ಲೂಕು ಸರ್ಕಾರಿ ಆಸ್ಪತ್ರೆಯಲ್ಲಿ ಎಲ್ಲಾ ಒಳ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮಾಡಿ ಶೀಘ್ರ ಗುಣಮುಖರಾಗುವಂತೆ ಪ್ರಾರ್ಥಿಸಿದರು.

ಕೆ.ಶಿವರಾಂ ಅವರು ಹಲವು ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಯಾಗಿ, ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ, ಎಂ.ಎಸ್.ಐ.ಎಲ್. ಸಂಸ್ಥೆಯ ಎಂ.ಡಿಯಾಗಿ ಸೇವೆ ಸಲ್ಲಿಸಿದ್ದು ಬಡವರು, ದೀನ ದಲಿತರಿಗೆ ಹೆಚ್ಚಿನ ಸಹಕಾರ ನೀಡಿದ್ದಾರೆ. ವಿವಿಧ ಯೋಜನೆಗಳಲ್ಲಿ ಸುಮಾರು 1ಸಾವಿರಕ್ಕೂ ಅಧಿಕ ಆಶ್ರಯ ಮನೆಗಳನ್ನು ರಾಜೀವ್ ಗಾಂಧೀ ವಸತಿ ನಿಗಮದ ಮೂಲಕ ಕೊಡಿಸಿದ್ದಾರೆ. ಎಂ.ಎಸ್.ಐ.ಎಲ್ ಸಂಸ್ಥೆಯಲ್ಲಿ ಬಡ ನಿರುದ್ಯೋಗಿಗಳಿಗೆ ಉದ್ಯೋಗ ಕೊಡಿಸುವ ಮೂಲಕ ಸಾವಿರಾರು ಮಂದಿಯ ಜೀವನಕ್ಕೆ ದಾರಿದೀಪವಾಗಿದ್ದಾರೆ. ಸಾವಿರಾರು ಮಂದಿ ರೈತರಿಗೆ ಗಂಗಾ ಕಲ್ಯಾಣ ಯೋಜನೆ ಮೂಲಕ ಉಚಿತ ಕೊಳವೆ ಬಾವಿ ಕೊರೆಸಿಕೊಳ್ಳುವಂತೆ ಜಾಗೃತಿ ಮೂಡಿಸಿ ಹಿಂದುಳಿದ ವರ್ಗಗಳ ಜನರ ಕಲ್ಯಾಣಕ್ಕೆ ಶ್ರಮಿಸಿದ್ದಾರೆ. ಕೇವಲ ಒಂದು ಜಾತಿಗೆ ಸೀಮಿತವಾಗಿ ಕೆಲಸ ಮಾಡದೇ ಎಲ್ಲಾ ವರ್ಗದ ಜನರಿಗೂ ತಮ್ಮದೇ ಆದ ಜನ ಸೇವೆಯನ್ನು ಅಧಿಕಾರ ಇದ್ದಾಗ, ನಿವೃತ್ತಿಯ ನಂತರವೂ ಮಾಡಿದ್ದಾರೆ. ಜೊತೆಗೆ ದಲಿತರಿಗೆ ಮುಖ್ಯಮಂತ್ರಿ ಸ್ಥಾನ ಸಿಗಬೇಕು ಎಂದು ಪರಿಕಲ್ಪನೆಯಿಂದ ಛಲವಾದಿ ಮಹಾಸಭಾ ಸಂಘಟನೆಯನ್ನು ಹುಟ್ಟು ಹಾಕಿ ದಲಿತ ಬಂಧುಗಳನ್ನು ಸಂಘಟಿಸಿ ಅವರ ಅಭಿವೃದ್ಧಿಗೂ ಶ್ರಮಿಸುತ್ತಿದ್ದರು. ಕಾಂಗ್ರೆಸ್, ಬಿಜೆಪಿ ಪಕ್ಷಗಳಲ್ಲಿ ಕೆಲಸ ಮಾಡಿದ್ದು.

ಕೆ.ಶಿವರಾಮ್ ಅವರು ಶಾಸಕರಾಗಿ ಅಥವಾ ಸಂಸದರಾಗಿ ರಾಜ್ಯದ ಎಲ್ಲಾ ಜನತೆಯ ಅಭಿವೃದ್ಧಿಗೆ ಶ್ರಮಿಸುವ ಮಹದಾಸೆಯನ್ನು ಇಟ್ಟುಕೊಂಡಿದ್ದರು. ಅಂಬೇಡ್ಕರ್ ಅವರ ಆದರ್ಶಗಳನ್ನು ಮೈಗೂಡಿಸಿಕೊಂಡಿದ್ದ ಕೆ.ಶಿವರಾಂ ಅವರನ್ನು ಎಲ್ಲಾ ಜಾತಿ, ಎಲ್ಲಾ ಧರ್ಮದ ಜನರು ಅಪಾರವಾಗಿ ಇಷ್ಟಪಡುತ್ತಿದ್ದರು ಏಕೆಂದರೆ ಅವರು ತಮ್ಮ ಅಧಿಕಾರದ ಅವಧಿಯಲ್ಲಿ ಜಾತಿ, ಧರ್ಮ ಮೀರಿ ಒಳ್ಳೆಯ ಸೇವೆ ನೀಡಿದ್ದರಿಂಗಾಗಿ ಎಲ್ಲರ ಪ್ರೀತಿ-ವಿಶ್ವಾಸಕ್ಕೆ ಪಾತ್ರರಾಗಿದ್ದರು. ಇಂತಹ ಉತ್ತಮ ಸಂಘಟಕ, ಉತ್ತಮ ಸಮಾಜ ಸೇವಕ, ಉತ್ತಮ ಅಧಿಕಾರಿ, ಉತ್ತಮ ರಾಜಕಾರಣಿ ಇಷ್ಟು ಬೇಗ ನಮ್ಮನ್ನು ಅಗಲಿದ್ದು ಕನ್ನಡ ನಾಡಿಗೆ ಹಾಗೂ ಅಹಿಂದ ವರ್ಗಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಛಲವಾದಿ ಮಹಾಸಭಾ ರಾಜ್ಯ ಸಮಿತಿ ಸದಸ್ಯರು ಹಾಗೂ ಪುರಸಭಾ ಸದಸ್ಯ ಡಿ.ಪ್ರೇಮಕುಮಾರ್ ಹಾಗೂ ಛಲವಾದಿ ಮಹಾಸಭಾ ಅಧ್ಯಕ್ಷ ಊಚನಹಳ್ಳಿ ನಟರಾಜ್ ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್, ವೈದ್ಯಾಧಿಕಾರಿ ಡಾ. ಶ್ರೀಕಾಂತ್, ಜಿ.ಪಂ.ಮಾಜಿ ಸದಸ್ಯ ರಾಮದಾಸ್, ಛಲವಾದಿ ಮಹಾಸಭಾ ಜಿಲ್ಲಾ ಉಸ್ತುವಾರಿ ಮಾಂಬಳ್ಳಿ ಜಯರಾಂ, ಕಾರ್ಯದರ್ಶಿ ಜೈನ್ನಹಳ್ಳಿ ಹರೀಶ್, ಸಹಕಾರ್ಯದರ್ಶಿ ಹರಿಹರಪುರ ನರಸಿಂಹ, ಖಜಾಂಚಿ ವಿವೇಕ್, ಲಕ್ಷ್ಮೀಪುರ ರಂಗಸ್ವಾಮಿ, ತೆಂಡೇಕೆರೆ ನಿಂಗಯ್ಯ, ನಾಟನಹಳ್ಳಿ ಎನ್.ಜೆ.ಮಂಜು, ಚೌಡೇನಹಳ್ಳಿ ದೇವರಾಜು, ಬಿ.ಎಸ್.ಪಿ.ಗಂಗಾಧರ್, ಕಾಗೆಪುರ ರವಿ, ಅಕ್ಕಿಹೆಬ್ಬಾಳು ಗಣೇಶ್, ಕಬ್ಬಲಗೆರೆಪುರ ಪುಟ್ಟರಾಜು, ಹರಿಹರಪುರ ರಂಗರಾಮು, ನಗರೂರು ಮಂಜಯ್ಯ, ಲಿಂಗಾಪುರ ಬಸವರಾಜು, ಪುರಸಭಾ ಮಾಜಿ ಸದಸ್ಯ ಕೆ.ಆರ್. ನೀಲಕಂಠ, ಮಾತೃಭೂಮಿ ಅನಾಥಾಶ್ರಮದ ಮುಖ್ಯಸ್ಥ ಜೈಹಿಂದ್ ನಾಗಣ್ಣ ಸೇರಿದಂತೆ ಹಲವು

## ಯುವಜನರು ರಾಜಕೀಯಕ್ಕೆ ಬನ್ನಿ -ಸಮಾಜವಾದಿ

### ಯುವಜನ ಸಭಾ ಅಧ್ಯಕ್ಷ ಆನಂದ್ ಸಿ ತಿರುಮಲ ಅಭಿಮತ



**ಸಮಾಜದ ಅಭಿರುದ್ದಿಗಾಗಿ ಸಮಾಜವಾದಿ ಪಾರ್ಟಿಯ ಯುವಜನ ಸಭಾ ಮುಂಚೂಣಿ- ಯುವಜನ ಸಭಾ ರಾಜ್ಯಾಧ್ಯಕ್ಷ ಆನಂದ್ ಸಿ ತಿರುಮಲ**

**ಯಾದಗಿರಿ**: ಸಂವಿಧಾನ ರಕ್ಷಣೆ ಮತ್ತು ಸಮಾಜದ ಯುವಜನ ಅಭಿರುದ್ದಿಗಾಗಿ ಸಮಾಜವಾದಿ ಪಾರ್ಟಿಯ ರಾಜ್ಯದಲ್ಲಿ ಅವಶ್ಯಕತೆಯಿದೆ ಎಂದು ಸಮಾಜವಾದಿ ಪಾರ್ಟಿ ಯುವಜನ ಸಭಾ SYS ನ ರಾಜ್ಯಾಧ್ಯಕ್ಷರಾದ ಆನಂದ್ ಸಿ ತಿರುಮಲ ಹೇಳಿದರು.

ಅವರು ಇಂದು ಯಾದಗಿರಿ ಪತ್ರಿಕಾ ಭವನ ದಲ್ಲಿ ಸುದ್ದಿಗೋಷ್ಠಿಲ್ಲಿ ಮಾತನಾಡಿ ಪುನೀತ್ ರಾಜ್ ಕಮತಗಿ ಅವರನ್ನು ಸಮಾಜವಾದಿ ಪಾರ್ಟಿ ಯುವ ಜನ ಸಭಾ ಕಲ್ಯಾಣ ಕರ್ನಾಟಕ ನೂತನ ಅಧ್ಯಕ್ಷರಾಗಿ ನೇಮಿಸಿ ಆದೇಶ ಮಾಡಿ ಮಾತನಾಡಿದ ಅವರು ರಾಜ್ಯದಲ್ಲಿ ಭ್ರಷ್ಟಾಚಾರ ದಲ್ಲಿ ಮುಳುಗಿರುವ ರಾಜಕೀಯ ಪಕ್ಷಗಳನ್ನು ಜನರು ತಿರಸ್ಕರಿಸಿದ್ದಾರೆ. ಈ ನಿಟ್ಟಿನಲ್ಲಿ ಯುವಜರಿಗೆ ರಾಜ್ಯದಲ್ಲಿ ನಮ್ಮ ರಾಷ್ಟ್ರೀಯ ನಾಯಕರಾದ ಮಾಜಿ ಮುಖ್ಯ ಮಂತ್ರಿ ಅಖಿಲೇಶ್ ಯಾದವ್ ಜೀ ರವರು ಯುವಕರನ್ನು ರಾಜಕೀಯ ಚುಕ್ಕಾಣಿ ಇಡಿಯುವಂತ ಯುವಜನರನ್ನು ಗುರುತಿಸಿ ರಾಜ್ಯದಲ್ಲಿ ಪಿ ಡಿ ಎ ಕಾರ್ಯಕ್ರಮ ಗಳನ್ನು ರೂಪಿಸಬೇಕು ಯುವಜನರಿಗೆ ತಿಳಿಸುವ ನಿಟ್ಟಿನಲ್ಲಿ ಸಮಾಜವಾದಿ ಪಕ್ಷದ ತತ್ವ ಸಿದ್ಧಾಂತಗಳನ್ನು ಜನರಿಗೆ ತಜಾಗೃತಿ ಮೂಡಿಸುವ ಕೆಲಸ ನಾವು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪಕ್ಷ ಸಂಘಟನೆ ಮಾಡುತೇವೆ ಎಂದು ಹೇಳಿದರು . ನೂತನವಾಗಿ ಕಲ್ಯಾಣ ಕರ್ನಾಟಕ ದ ಅಧ್ಯಕ್ಷರಾಗಿ ಆಯ್ಕೆಯಾದ ಪುನೀತ್ ರಾಜ್ ಕಮತಗಿ ಮಾತನಾಡಿ ಯುವಜನರನ್ನು ಮುಖ್ಯ ವಾಗಿ ರಾಜಕೀಯಕ್ಕೆ ಬಂದು ಅವರು ಸಾಮಾಜಿಕವಾಗಿ ಇರುವ ಮೂಲಭೂತ ಹಕ್ಕುಗಳನ್ನು ಪಡೆದುಕೊಳಬೇಕು ಪ್ರತಿಯೊಬ್ಬರು ಸಾಮಾಜಿಕ ನ್ಯಾಯ ಪಡೆದು ಕೊಳ್ಳಬೇಕು ಕಲ್ಯಾಣ ಕರ್ನಾಟಕದ ಯುವಜನ ರನ್ನು ಒಟ್ಟುಗುಡಿಸಿ ನೊಂದ ಯುವಜನತೆ ನ್ಯಾಯ ಕೊಡಿಸಿ ಅವರಗೆ ಮಾನಸಿಕ ಧೈರ್ಯ ತುಂಬುವ ಕೆಲಸ ಮಾಡುತ್ತೇನೆ ಎಂದು ಹೇಳಿದರು.ಸಮಾಜವಾದಿ ಪಕ್ಷದ ಅಧ್ಯಕ್ಷ ಎನ್ ಮಂಜಪ್ಪ ಯಾದವ್,ಸಮಾಜವಾದಿ ಪಕ್ಷದ ಯುವಜನ ಸಭಾದ SYS ಕರ್ನಾಟಕ,ರಾಜ್ಯ ಸಂಘಟನಾ ಕಾರ್ಯದರ್ಶಿ ರಂಗನಾಥ್ ಎಲ್ ಪತ್ರೋಟಿ,ಕಲ್ಯಾಣ ಕರ್ನಾಟಕ ಪ್ರಧಾನ ಕಾರ್ಯದರ್ಶಿ ಲೋಕೇಶ್ ರಾಠೋಡ್, ಯಾದಗಿರಿ ಜಿಲ್ಲಾ ಅಧ್ಯಕ್ಷರು ನಾಗರಾಜ್ ಪಟೇಲ್ಉಪಸ್ಥಿತರಿದ್ದರು.

## ಲೈಂಗಿಕ ಕಿರುಕುಳ ಆರೋಪ: ಜಾನಪದ ಗಾಯಕ ಮ್ಯೂಸಿಕ್ ಮೈಲಾರಿ ವಿರುದ್ಧ ದೂರು ದಾಖಲು




**ಬಾಗಲಕೋಟೆ**: ಯೂಟ್ಯೂಬ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಟ್ರೆಂಡಿಂಗ್ ಸ್ಟಾರ್ ಎಂದು ಗುರುತಿಸಿಕೊಂಡಿರುವ ಜಾನಪದ ಗಾಯಕ ಮ್ಯೂಸಿಕ್ ಮೈಲಾರಿ ವಿರುದ್ಧ ಅಪ್ರಾಪ್ತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದಡಿ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ. ಈ ಪ್ರಕರಣದಲ್ಲಿ ಮ್ಯೂಸಿಕ್ ಮೈಲಾರಿ ಸೇರಿ ಒಟ್ಟು ಏಳು ಜನರ ವಿರುದ್ಧ ಎಫ್ಐಆರ್ ದಾಖಲಾಗಿದೆ.

ಬೆಳಗಾವಿ ಜಿಲ್ಲೆಯ ಮೂಲದ ಮ್ಯೂಸಿಕ್ ಮೈಲಾರಿ, ಅಕ್ಟೋಬರ್ 24ರಂದು ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಗ್ರಾಮವೊಂದರಲ್ಲಿ ಹನುಮಂತ ದೇವರ ಓಕುಳಿ ಪ್ರಯುಕ್ತ ಆಯೋಜಿಸಿದ್ದ ಆರ್ಕೆಸ್ಟ್ರಾ ಕಾರ್ಯಕ್ರಮಕ್ಕೆ ಹಾಡಲು ಆಗಮಿಸಿದ್ದ ಎನ್ನಲಾಗಿದೆ. ಇದೇ ಕಾರ್ಯಕ್ರಮದಲ್ಲಿ ಅಪ್ರಾಪ್ತ ಬಾಲಕಿ ಡ್ಯಾನ್ಸ್ ಮಾಡಲು ಭಾಗವಹಿಸಿದ್ದಳು ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಕಾರ್ಯಕ್ರಮದ ವೇಳೆ ಬಾಲಕಿಯನ್ನು ನಂಬಿಸಿ, ಲಾಡ್ಜ್‌ಗೆ ಕರೆದುಕೊಂಡು ಹೋಗಿ ಲೈಂಗಿಕ ದೌರ್ಜನ್ಯ ಎಸಗಲಾಗಿದೆ ಎಂದು ಬಾಲಕಿ ಪೊಲೀಸರಿಗೆ ನೀಡಿರುವ ದೂರಿನಲ್ಲಿ ಗಂಭೀರ ಆರೋಪ ಮಾಡಿದ್ದಾಳೆ. ಅಲ್ಲದೆ, ಅತ್ಯಾಚಾರ ನಡೆಸಿದ ನಂತರ ವಿಡಿಯೋ ಮಾಡಿಕೊಂಡಿದ್ದಾರೆ ಎಂಬುದನ್ನೂ ಬಾಲಕಿ ಆರೋಪಿಸಿದ್ದಾಳೆ. ಈ ಘಟನೆಯಲ್ಲಿ ಮ್ಯೂಸಿಕ್ ಮೈಲಾರಿ ಸೇರಿ ಏಳು ಜನರು ಭಾಗಿಯಾಗಿದ್ದಾರೆ ಎಂದು ದೂರಿನಲ್ಲಿ ಹೇಳಲಾಗಿದೆ.

ಘಟನೆಯ ಬಳಿಕ ಬಾಲಕಿ, ಡಿಸೆಂಬರ್ 14ರಂದು ಚಿಕ್ಕೋಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾಳೆ. ಪ್ರಕರಣದ ವ್ಯಾಪ್ತಿ ಮತ್ತು ಸ್ಥಳದ ಆಧಾರದ ಮೇಲೆ, ಡಿಸೆಂಬರ್ 15ರಂದು ಪ್ರಕರಣವನ್ನು ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದೆ. ಮಹಾಲಿಂಗಪುರ ಪೊಲೀಸ್ ಠಾಣೆಯಲ್ಲಿ ಮ್ಯೂಸಿಕ್ ಮೈಲಾರಿ ಸೇರಿ ಏಳು ಆರೋಪಿಗಳ ವಿರುದ್ಧ ಪೋಕ್ಸೋ ಕಾಯ್ದೆಯ ಅಡಿಯಲ್ಲಿ ಎಫ್ಐಆರ್ ದಾಖಲಾಗಿದ ಸದ್ಯ ಪೊಲೀಸರು ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿದ್ದು, ಬಾಲಕಿಯ ವೈದ್ಯಕೀಯ ಪರೀಕ್ಷೆ ಹಾಗೂ ಹೇಳಿಕೆ ದಾಖಲಿಸುವ ಪ್ರಕ್ರಿಯೆ ನಡೆಯುತ್ತಿದೆ.

ಆರೋಪಿಗಳ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದು, ಪ್ರಕರಣದ ಎಲ್ಲಾ ಆಯಾಮಗಳನ್ನು ಗಂಭೀರವಾಗಿ ಪರಿಶೀಲಿಸಲಾಗುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಮ್ಯೂಸಿಕ್ ಮೈಲಾರಿ ಹಾಡಿರುವ ಹಲವು ಜಾನಪದ ಹಾಡುಗಳು ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ವೈರಲ್ ಆಗಿದ್ದವು. ವಿಶೇಷವಾಗಿ 'ಬಾಗಲಕೋಟೆ ಬಸ್ ಸ್ಟ್ಯಾಂಡ್ ನಾಗ...' ಎಂಬ ಹಾಡು ಯೂಟ್ಯೂಬ್, ಇನ್‌ಸ್ಟಾಗ್ರಾಂ ಹಾಗೂ ರೀಲ್ಸ್‌ಗಳಲ್ಲಿ ಅಪಾರ ಜನಪ್ರಿಯತೆ ಪಡೆದುಕೊಂಡಿತ್ತು. ಇದೇ ಜನಪ್ರಿಯತೆಯಿಂದ ಮ್ಯೂಸಿಕ್ ಮೈಲಾರಿ ರಾಜ್ಯಾದ್ಯಂತ ಹಲವು ಕಾರ್ಯಕ್ರಮಗಳಿಗೆ ಆಹ್ವಾನ ಪಡೆಯುತ್ತಿದ್ದ ಎನ್ನಲಾಗಿದೆ.

## ಸೈಕಲ್ ಆಟವಾಡುತ್ತಾ ನೀರಿನ ಸಂಪ್‌ಗೆ ಬಿದ್ದು 4 ವರ್ಷದ ಬಾಲಕ ಸಾವು



**ಹಾಸನ**: ಸೈಕಲ್‌ನಲ್ಲಿ ಆಟವಾಡುತ್ತಿದ್ದ ವೇಳೆ ಆಯತಪ್ಪಿ ನೀರಿನ ಸಂಪ್‌ಗೆ ಬಿದ್ದು 4 ವರ್ಷದ ಬಾಲಕ ಮೃತಪಟ್ಟಿರುವ ಘಟನೆ ಹಾಸನದ ಅಣಚಿಹಳ್ಳಿ ಗ್ರಾಮದಲ್ಲಿ ನಡೆದಿದೆ. ಮೃತ ಬಾಲಕನನ್ನು ಎಡನ್ ಸ್ಟೀವ್ (4) ಎಂದು ಗುರುತಿಸಲಾಗಿದೆ. ಮನೆಯ ಮುಂದೆ ಎಡನ್ ಸ್ಟೀವ್ ಆಟವಾಡುತ್ತಿದ್ದ. ಈ ವೇಳೆ ಪೋಷಕರು ಮನೆಯೊಳಗಿದ್ದರು. ಸ್ವಲ್ಪ ಹೊತ್ತಿನ ಬಳಿಕ ಮನೆಯಿಂದ ಹೊರ ಬಂದ ಪೋಷಕರು ಮಗುವಿಗಾಗಿ ಹುಡುಕಾಡಿದ್ದಾರೆ. ಈ ವೇಳೆ ನೀರಿನ ಸಂಪ್ ಬಳಿ ಮಗುವಿನ ಸೈಕಲ್ ಬಿದ್ದಿದ್ದು ಸಂಪ್ ಪರಿಶೀಲಿಸಿದಾಗ ಶವ ನೀರಿನಲ್ಲಿ ತೇಲುತ್ತಿರುವುದು ಕಾಣಿಸಿದೆ ಕೂಡಲೇ ಹಾಸನ ನಗರದ ಖಾಸಗಿ ಆಸ್ಪತ್ರೆಗೆ ಮಗುವನ್ನು ಕರೆದೊಯ್ಯಲಾಗಿತ್ತು. ಅಷ್ಟರಲ್ಲಿ ಮಗು ಸಾವನ್ನಪ್ಪಿದೆ ಎಂದು ವೈದ್ಯರು ದೃಢಪಡಿಸಿದ್ದಾರೆ. ಸ್ಥಳಕ್ಕೆ ಹಾಸನ ನಗರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ

## ಶಾಮನೂರು ಶಿವಶಂಕರಪ್ಪ ರಾಜ್ಯಕ್ಕೆ ತುಂಬಲಾರದ ನಷ್ಟ: ಎನ್.ಎಸ್.ನಟರಾಜು



**ನೆಲಮಂಗಲ** : ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀÁಯ ಅಧ್ಯಕ್ಷ , ಮಾಜಿಸಚಿವ ಶಾಮನೂರು ಶಿವಶಂಕರಪ್ಪ ಅವರ ಅಗಲಿಕೆಯಿಂದಾಗಿ ನಮ್ಮ ಸಮುದಾಯಕ್ಕಷ್ಟೇ ಅಲ್ಲದೆ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಮಹಸಭಾ ಕೇಂದ್ರಘಟಕದ ಮಾಜಿ ನಿರ್ದೇಶಕ ಎನ್.ಎಸ್.ನಟರಾಜು ತಿಳಿಸಿದರು.

ನಗರದ ಮುಖ್ಯರಸ್ತೆಯಲ್ಲಿರುವ ಎನ್.ಸಿ.ಎಸ್ ಸದನದಲ್ಲಿರುವ ಅಖಿಲಭಾರತ ವೀರಶೈವ ಲಿಂಗಾಯತ ಮಹಾಸಭಾ ಕಚೇರಿಯಲ್ಲಿ ಜಿಲ್ಲೆ ಮತ್ತು ತಾಲೂಕು ಘಟಕದವತಿಯಿಂದ ಹಮ್ಮಿಕೊಂಡಿದ್ದ ಶಾಮನೂರು ಶಿವಶಂಕರಪ್ಪ ಅವರ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮಧ್ಯ ಕರ್ನಾಟಕ ಭಾಗದಲ್ಲಿ ಬಾಪೂಜಿ ಸಂಸ್ಥೆಯ ಮೂಲಕ ಶಿಕ್ಷಣಕ್ರಾಂತಿಯನ್ನು ಮಾಡಿದಂತಹ ಧೀಮಂತ ನಾಯಕರು ಸದಾ ಕಾಲ ಸರ್ವಸಮಾಜವನ್ನು ಸಮಾನತೆಯಿಂದ ಕಾಣುತ್ತಿದ್ದ ಶಿವಶಂಕರಪ್ಪ ಅವರ ನೇರ ನಡೆನುಡಿ ನಮ್ಮೆಲ್ಲರಿಗೂ ಮಾದರಿಯಾಗಿದೆ, ಮಹಾಸಭಾವನ್ನು ಕಟ್ಟಿಬೆಳಸುವಲ್ಲಿ ಶ್ರೀಯುತರ ಪಾತ್ರ ಅಸಾಧಾರಣವಾದದ್ದು ಎಂದು ಅವರ ಕಾರ್ಯವೈಖರಿಯನ್ನು ಅವರ ಆತ್ಮಕ್ಕೆ ಶಾಂತಿಕೋರಿದರು.

ಮಹಾಸಭಾದ ಬೆಂಗಳೂರು ಗ್ರಾಮಾಂತರ ಜಿಲ್ಲಾಘಟಕದ ಪ್ರದಾನಕಾರ್ಯದರ್ಶಿ ಎನ್.ಎಸ್.ಶಾಂತಕುಮಾರ್ ಮಾತನಾಡಿ ರಾಜ್ಯದಲ್ಲಿ ವೀರಶೈವ ಲಿಂಗಾಯತ ವಿಚಾರದಲ್ಲಿ ಏಕತೆಯನ್ನು ಕಾಯುವಮೂಲಕ ವೀರಶೈವಲಿಂಗಾಯತ ಒಂದೆ ಎಂಬುದನ್ನು ಗಟ್ಟಿಯಾಗಿ ಹೇಳಿದಂತಹ ಧೀಮಂತ ನಾಯಕರು ಶಿವಶಂಕರಪ್ಪ ಅವರು, ಮಹಾಸಭಾದಲ್ಲಿ ಸುಧೀರ್ಘ ಕಾಲ ರಾಜ್ಯಾಧ್ಯಕ್ಷರಾಗಿದ್ದರು. 1930 ರಲ್ಲಿ ಜನಿಸಿದ ಶಾಮನೂರ ಶಿವಶಂಕರಪ್ಪ ಅವರು 95ನೇ ವಯಸ್ಸಿನಲ್ಲಿ ಭಾರತದ ಅತ್ಯಂತ ಹಿರಿಯ ಶಾಸಕರಾಗಿ ಗುರುತಿಸಿಕೊಂಡಿದ್ದಾರೆ. ಜೂನ್ 16,1930 ರಂದು ದಾವಣಗೆರೆಯಲ್ಲಿ ಜನಿಸಿದ ಇವರು, ಸಾಮಾನ್ಯ ಕುಟುಂಬದಿÀದ ಬಂದು ರಾಜಕೀಯ, ಶಿಕ್ಷಣ, ಉದ್ಯಮ ಮತ್ತು ಸಮಾಜಸೇವೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದರು. ಸಮಾಜ ಸೇವೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಶಿವಶಂಕರಪ್ಪನವರು ಶೈಕ್ಷಣಿಕ ಕ್ಷೇತ್ರಕ್ಕೆ ವಿಶೇಷ ಕೊಡುಗೆ ನೀಡಿದ್ದರು. ಅವರ ಅಗಲಿಕೆಯು ನಾಡಿಗೆ ಹಾಗೂ ನಮ್ಮ ಸಮುದಾಯಕ್ಕೆ ತುಂಬಲಾರದ ನಷ್ಟವುಂಟು ಮಾಡಿದೆ. ಭಗವಂತ ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ ಹಾಗೂ ಅವರ ಕುಟುಂಬ ವರ್ಗಕ್ಕೆ, ಬೆಂಬಲಿಗರಿಗೆ ಈ ದುಃಖ ಭರಿಸುವ ಶಕ್ತಿ ನೀಡಲೆಂದು ಪ್ರಾರ್ಥಿಸುತ್ತೇನೆ ಎಂದರು.

ಸÀದರ್ಭದಲ್ಲಿ ಮಹಾಸಭಾ ರಾಜ್ಯ ಮಹಿಳಾಘಟಕದ ನಿರ್ದೇಶಕಿ ರಾಜಮ್ಮ , ಜಿಲಾಧ್ಯಕ್ಷ ರೇವಣ್ಣಸಿದ್ದಯ್ಯ, ತಾಲೂಕು ಅಧ್ಯಕ್ಷ ಎನ್.ರಾಜಶೇಖರ್, ಮಹಿಳಾಘಟಕದ ತಾಲೂಕು ಅಧ್ಯಕ್ಷೆ ವೇದಾವತಿ, ಜಿಲ್ಲಾಪ್ರ.ಕಾರ್ಯದರ್ಶಿ ಶಾಂತಕುಮಾರ್, ಮಾಜಿಕಾರ್ಯದರ್ಶಿ ಎನ್.ಬಿ.ದಯಾಶಂಕರ್, ರಾಜ್ಯಮಾಜಿ ನಿರ್ದೇಶಕ ಎಂ.ಬಿ.ಮÀಜುನಾಥ್, ರಾಜ್ಯಯುವಘಟಕದ ಮಾಜಿನಿರ್ದೇಶಕ ಕೊಟ್ರೇಶ್.ಆರ್. ಜಿಲ್ಲಾನಿರ್ದೇಶಕರಾದ ಭೃಂಗೇಶ್, ರೇಣುಕಾಸ್ವಾಮಿ, ಗಂಗಾಧರ್, ಮಂಜುಳಾ ಸುರೇಶ್, ಪೂರ್ಣಿಮಾ ಸುಗ್ಗರಾಜು, ಮುಖಂಡರಾದ ಮೃತ್ಯುಂಜಯ, ಸದಾನಂದಾರಾಧ್ಯ, ಹರೀಶ್, ಸಿದ್ದರಾಜು,ಗಿರೀಶ್, ಗಣೇಶ್,ಸುಮಾ, ಮಂಜುಳಾ ಮತ್ತಿತರರು ಉಪಸ್ಥಿತರಿದ್ದರು

ನೆಲಮಂಗಲದ ಎನ್‌ಸಿಎಸ್ ಸದನದಲ್ಲಿರುವ ಅಖಿಲಭಾರತ ವೀರಶೈವ ಲಿಂಗಾಯತ ಮಹಾಸಭಾ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಶಾಮನೂರು ಶಿವಶಂಕರಪ್ಪ ಅವರ ಭಾವಪೂರ್ಣಶ್ರದ್ಧಾಂಜಲಿ ಕಾರ್ಯಕ್ರದಲ್ಲಿ ಮಹಾಸಭಾ ಮುಖಂಡರುಗಳು ಪುಷ್ಪನಮನ ಸಲ್ಲಿಸಿದರು. ಜಿಲ್ಲಾಘಟಕದ ಪ್ರದಾನಕಾರ್ಯದರ್ಶಿ ಎನ್.ಎಸ್. ಶಾಂತಕುಮಾರ್, ತಾಲೂಕು ಅಧ್ಯಕ್ಷ ಎನ್. ರಾಜಶೇಖರ್ ಮತ್ತಿತರರಿದ್ದರು.

## ನಾಡು ನುಡಿ ಜಲ ಸಮಸ್ಯೆಗಳ ಪರಿಹಾರಕ್ಕೆ ಜಯ ಕರ್ನಾಟಕ ಸದಾ ಸಿದ್ದ: ಜಗದೀಶ್



ಕೃಷ್ಣರಾಜಪೇಟೆ ಪಟ್ಟಣದ ಪುರಸಭಾ ಕಾರ್ಯಾಲಯದ ಪಕ್ಕದ ಮೈದಾನದಲ್ಲಿ ಜಯ ಕರ್ನಾಟಕ ಸಂಘಟನೆ ಆಯೋಜಿಸಿದ್ದ ಅದ್ದೂರಿ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರು, ನಿವೃತ್ತ ಯೋಧರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಅಭಿನಂದಿಸಿ, ಗೌರವಿಸಿ ಮಾತನಾಡಿದರು

ಕರ್ನಾಟಕ ರಾಜ್ಯದ ಹೆಮ್ಮೆಯ ಕನ್ನಡಪರ ಸಂಘಟನೆ ಯಾಗಿರುವ ಜಯ ಕರ್ನಾಟಕ ಸಂಘಟನೆಯು ಅಣ್ಣಾ ಮುತ್ತಪ್ಪ ರೈ ಅವರ ನೇತೃತ್ವದಲ್ಲಿ ಆರಂಭವಾಗಿ, ಬದ್ಧತೆ ಹಾಗೂ ಪ್ರಾಮಾಣಿಕತೆಯಿಂದ ಕೆಲಸ ಮಾಡುತ್ತಾ, ಕನ್ನಡ ಭಾಷೆ, ನೆಲ ಜಲ ಹಾಗೂ ಸಂಸ್ಕೃತಿಯನ್ನು ಉಳಿಸುವ ದಿಕ್ಕಿನಲ್ಲಿ ನಾಡಿನಾದ್ಯಂತ ಹೋರಾಟ ನಡೆಸುತ್ತಿದೆ. ಕನ್ನಡದ ಅಸ್ಮಿತೆಯನ್ನು ಎತ್ತಿ ಹಿಡಿಯುವ ದಿಕ್ಕಿನಲ್ಲಿ ಜಯ ಕರ್ನಾಟಕ ಸಂಘಟನೆಯ ಕಾರ್ಯಕರ್ತರು ಬದ್ಧತೆಯಿಂದ ಹೋರಾಟ ನಡೆಸಿದ್ದಾರೆ ಎಂದು ತಿಳಿಸಿದ ಡಾ. ಜಗಧೀಶ್ ಕನ್ನಡದ ನೆಲದಲ್ಲಿ ವಾಸಿಸುವ ಅನ್ಯ ಭಾಷಿಕರು ಕನ್ನಡವನ್ನು ಕಲಿತು, ಕನ್ನಡ ಭಾಷೆಯನ್ನು ಕಲಿತು ಕನ್ನಡದಲ್ಲಿಯೇ ವ್ಯವಹರಿಸ ಬೇಕು ಎಂಬ ಸಂದೇಶವನ್ನು ನೀಡುವ ಜೊತೆಗೆ, ಕನ್ನಡ ನೆಲ ಜಲ, ಭಾಷೆ ಹಾಗೂ ಸಂಸ್ಕೃತಿಗೆ ಧಕ್ಕೆ ಉಂಟಾದ ಸಮಯದಲ್ಲಿ ಯಾವುದೇ ಹೋರಾಟಕ್ಕೆ ನಮ್ಮ ಸಂಘಟನೆಯ ಕಾರ್ಯಕರ್ತರು ಶಿಸ್ತಿನ ಸಿಪಾಯಿಗಳಂತೆ ಸನ್ನದ್ಧರಾಗಿದ್ದಾರೆ ಎಂದು ಜಗದೀಶ್ ಹೇಳಿದರು. ಕನ್ನಡದ ನೆಲದಲ್ಲಿ ಯಾವುದೇ ರೀತಿಯ ಗಲಾಟೆ ಗದ್ದಲಗಳು ನಡೆಯದಂತೆ ಕಾನೂನು ಸುವ್ಯವಸ್ಥೆಯನ್ನು ಕಾಪಾಡುತ್ತಿರುವ ಪೊಲೀಸರು ಅಕಾಲಿಕವಾಗಿ ನಿಧನರಾದರೆ ರಾಜ್ಯ ಸರ್ಕಾರವು ಕೇವಲ 20 ಲಕ್ಷ ರೂಗಳ ಪರಿಹಾರವನ್ನು ನೀಡುತ್ತಿತ್ತು. ಆದರೆ ಜಯ ಕರ್ನಾಟಕ ಸಂಘಟನೆಯ ನೇತೃತ್ವದಲ್ಲಿ ನಾವು ಹೋರಾಟ ನಡೆಸಿದ ನಂತರ ರಾಜ್ಯ ಸರ್ಕಾರ 50 ಲಕ್ಷ ರೂಪಾಯಿಗಳನ್ನು ನೀಡುವುದನ್ನು ಜಾರಿಗೆ ತಂದಿದೆ ಇದು ಜಯ ಕರ್ನಾಟಕ ಸಂಘಟನೆಯ ಹೋರಾಟದ ಶಕ್ತಿ. ನಮ್ಮ ನೆಲ, ಜಲ ಹಾಗೂ ಭಾಷೆಗೆ ವಿಪತ್ತು ಎದುರಾದ ಸಂದರ್ಭದಲ್ಲಿ ನಾವು ಯಾವುದೇ ಹೋರಾಟ ಹಾಗೂ ತ್ಯಾಗ, ಬಲಿದಾನಕ್ಕೆ ಸಿದ್ಧರಾಗಿದ್ದೇವೆ ಎಂದು ಡಾ. ಜಗಧೀಶ್ ಗುಡುಗಿದರು.

ಕೃಷ್ಣರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಹೆಚ್.ಟಿ.ಮಂಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾಪನಹಳ್ಳಿ ಗವಿಮಠದ ಪೂಜ್ಯ ಸ್ವಾಮಿಗಳಾದ ಶ್ರೀಸ್ವತಂತ್ರ ಚನ್ನವೀರಯ್ಯ ಸ್ವಾಮೀಜಿ, ತೊಂಡೆಕಾಯಿ ಬಾಳೆಹೊನ್ನೂರು ಶಾಖ ಮಠದ ಪೂಜ್ಯ ಸ್ವಾಮೀಜಿಗಳಾದ ಗಂಗಾಧರ ಶಿವಾಚಾರ್ಯ ಸ್ವಾಮೀಜಿ, ಬೆಡದಹಳ್ಳಿಯ ಪಂಚಭೂತೇಶ್ವರ ಮಠದ ಸ್ವಾಮೀಜಿಗಳಾದ ಶ್ರೀ ರುದ್ರಮುನಿ ಸ್ವಾಮೀಜಿ ಅವರು ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದರು. ಆದಿಚುಂಚನಗಿರಿ ಯ ಹೇಮಗಿರಿ ಶಾಖಾಮಠದ ಗೌರವ ಕಾರ್ಯದರ್ಶಿಗಳಾದ ಡಾ.ಜೆ.ಎನ್. ರಾಮಕೃಷ್ಣೇಗೌಡ, ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ನಾಗೇಂದ್ರ ಕುಮಾರ್, ರಾಜ್ಯ ಆರ್‌ಟಿಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ, ರಾಜ್ಯ ಸರ್ಕಾರದ ಗ್ಯಾರಂಟಿ ಅನುಷ್ಠಾನ ಸಮಿತಿಯ ತಾಲೂಕು ಅಧ್ಯಕ್ಷ ಎ.ಬಿ. ಕುಮಾರ್, ಮಂಡ್ಯ ಹಾಲು ಒಕ್ಕೂಟದ ನಿರ್ದೇಶಕ ಡಾಲು ರವಿ, ಜಯಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷರಾದ ನಾರಾಯಣಸ್ವಾಮಿ, ಗೌರವಾಧ್ಯಕ್ಷ ಮುನಿಸ್ವಾಮಿ, ರಾಜ್ಯ ಉಪಾಧ್ಯಕ್ಷ ವಿಜಯಾ ಗೌಡ, ಮಂಡ್ಯ ಜಿಲ್ಲಾಧ್ಯಕ್ಷ ಡಾ. ಯೋಗಣ್ಣ, ಹಾಸ್ಯ ನಟರಾದ ಟೆನ್ನಿಸ್ ಕೃಷ್ಣ, ಕಿರುತೆರೆ ಕಲಾವಿದರಾದ ಶಿವಣ್ಣ , ಚಾರ್ಲಿ ಕುಮಾರ್, ನಂದೀಶ್, ಜಯ ಕರ್ನಾಟಕ ಸಂಘಟನೆ ತಾಲೂಕು ಘಟಕದ ಅಧ್ಯಕ್ಷ ಸೋಮಶೇಖರ ಗೌಡ, ತಾಲೂಕು ಯುವ ಘಟಕದ ಅಧ್ಯಕ್ಷ ಕಾಮನಹಳ್ಳಿ ಕೆ. ಎಲ್.ಮಹೇಶ್, ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಜಯಲಕ್ಷ್ಮಮ್ಮ , ಸರಸ್ವತಿ, ರತ್ನಮ್ಮ , ಮಧು, ಕುಮಾರ್ ಸೇರಿದಂತೆ ನೂರಾರು ಜನರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಾದ ವಿಷ್ಣು ಸೇನಾ ಸಮಿತಿಯ ರಾಜ್ಯಾಧ್ಯಕ್ಷ ಡಾ. ಪ್ರಶಾಂತ್ ಚಕ್ರವರ್ತಿ, ವಡಕಹಳ್ಳಿ ಮಂಜೇಗೌಡ, ಮಿಲ್ಟ್ರಿ ಸುಕುಮಾರ್, ಡಾ.ಶ್ರೀಕಾಂತ್, ಡಾ.ಕಾವ್ಯ, ಪತ್ರಕರ್ತ ಕಾಡು ಮೆಣಸ ಚಂದ್ರು ಅವರನ್ನು ಗಣ್ಯರು ಸನ್ಮಾನಿಸಿ ಗೌರವಿಸಿದ್ದರು. ತುಮಕೂರಿನ ದರ್ಶನ್ ಮೆಲೋಡೀಸ್ ಸುಗಮ ಸಂಗೀತ ತಂಡದ ಗಾಯಕರು ಗೀತ ಗಾಯನ ಕಾರ್ಯಕ್ರಮವನ್ನು ನಡೆಸಿಕೊಟ್ಟರು.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ದಿಢೀರ್ ಬಸ್ ಸಂಚಾರ ಸ್ಥಗಿತಕ್ಕೆ ನಿರ್ಧಾರ: ದಿನಾಂಕ ಘೋಷಿಸದೆ ಮುಷ್ಕರಕ್ಕೆ ಸಾರಿಗೆ ನೌಕರರ ಸಿದ್ಧತೆ

**ಬೆಂಗಳೂರು**: ರಾಜ್ಯಾದ್ಯಂತ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಮತ್ತೊಮ್ಮೆ ಗಂಭೀರ ಸಂಕಷ್ಟದ ಅಂಚಿಗೆ ತಲುಪಿದೆ. ಕೆಎಸ್‌ಆರ್‌ಟಿಸಿ ಬಿಎಂಟಿಸಿ ಕೆಎನ್ ಡಬ್ಲ್ಯುಎಸ್‌ಟಿಸಿ ಹಾಗೂ ಎನ್‌ಡಬ್ಲ್ಯುಕೆಆರ್ ಟಿಸಿ ಸೇರಿ ನಾಲ್ಕು ನಿಗಮಗಳ ಸಾರಿಗೆ ನೌಕರರು ಮತ್ತೆ ಮುಷ್ಕರಕ್ಕೆ ಸಜ್ಜಾಗುತ್ತಿದ್ದಾರೆ. ಈ ಬಾರಿ ಯಾವುದೇ ದಿನಾಂಕ ಘೋಷಣೆ ಇಲ್ಲದೆ, ಏಕಾಏಕಿ ಬಸ್ ಸಂಚಾರ ಸ್ಥಗಿತಗೊಳಿಸುವ ತಂತ್ರವನ್ನು ನೌಕರರು ರೂಪಿಸಿಕೊಂಡಿರುವುದು ಸರ್ಕಾರಕ್ಕೂ, ಸಾರ್ವಜನಿಕರಿಗೂ ಆತಂಕ ತಂದಿದೆ. ಈ ಹಿಂದೆ ಆಗಸ್ಟ್ 5ರಂದು ಸಾರಿಗೆ ನೌಕರರು ಮುಷ್ಕರಕ್ಕೆ ಮುಂದಾಗಿದ್ದರು. ಆದರೆ, ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಮುಷ್ಕರವನ್ನು ಕೈಬಿಡಬೇಕಾಯಿತು.



ಆ ಬಳಿಕ ಲವು ಸುತ್ತಿನ ಮಾತುಕತೆಗಳು ನಡೆದರೂ, ನೌಕರರ ಪ್ರಮುಖ ಬೇಡಿಕೆಗಳಿಗೆ ಸರ್ಕಾರ ಸ್ಪಷ್ಟ ಭರವಸೆ ನೀಡಿಲ್ಲ ಎನ್ನಲಾಗಿದೆ. ಇದರಿಂದ ಅಸಮಾಧಾನಗೊಂಡಿರುವ ನೌಕರರು ಮತ್ತೊಮ್ಮೆ ಹೋರಾಟದ ಹಾದಿ ಹಿಡಿಯಲು ನಿರ್ಧರಿಸಿದ್ದಾರೆ. ಸಾರಿಗೆ ನೌಕರರ ಬೇಡಿಕೆಗಳ ಕುರಿತು ಇತ್ತೀಚೆಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರೊಂದಿಗೆ ಸಭೆ ನಡೆದಿತ್ತು. ಆದರೆ, ವೇತನ ಹೆಚ್ಚಳ, ವೇತನ ಹಿಂಬಾಕಿ ಪಾವತಿ ಸೇರಿದಂತೆ ಪ್ರಮುಖ ವಿಚಾರಗಳಲ್ಲಿ ಒಮ್ಮತ ಮೂಡದೆ ಸಭೆ ಅಂತ್ಯಗೊಂಡಿದೆ. ಈಗಾಗಲೇ ಮುಖ್ಯಮಂತ್ರಿ ಜೊತೆ ನಾಲ್ಕು ಸುತ್ತಿನ ಸಭೆ, ಸಾರಿಗೆ ಸಚಿವರ ಜೊತೆ ಮೂರು ಸುತ್ತಿನ ಚರ್ಚೆ ನಡೆದಿದ್ದರೂ, ಸ್ಪಷ್ಟ ತೀರ್ಮಾನ ಕೈಗೊಳ್ಳದಿರುವುದು ನೌಕರರಲ್ಲಿ ಆಕ್ರೋಶ ಹೆಚ್ಚಿಸಿದೆ.

ಮುಷ್ಕರಕ್ಕೆ ಸಿದ್ಧತೆಮೂಲಗಳ ಪ್ರಕಾರ, ಬುಧವಾರದಿಂದ ಸಾರಿಗೆ ನೌಕರರ ಮುಖಂಡರು ರಾಜ್ಯದ ಎಲ್ಲ ಬಸ್ ಡಿಪೋಗಳಿಗೆ ಭೇಟಿ ನೀಡಿ, ನೌಕರರನ್ನು ಮುಷ್ಕರಕ್ಕೆ ಸಜ್ಜಾಗುವಂತೆ ಮನವಿ ಮಾಡುವ ಅಭಿಯಾನ ಆರಂಭಿಸಲಿದ್ದಾರೆ. ಯಾವುದೇ ಕ್ಷಣದಲ್ಲಿ ಬಸ್ ಸಂಚಾರ ನಿಲ್ಲುವ ಸಾಧ್ಯತೆ ಇದೆ. ದಿನಾಂಕವಿಲ್ಲದ ಮುಷ್ಕರ - ಸರ್ಕಾರಕ್ಕೆ ಟಕ್ಕರ್!

ಮುಂಚಿತವಾಗಿ ಮುಷ್ಕರದ ದಿನಾಂಕ ಘೋಷಿಸಿದರೆ ಸರ್ಕಾರ ಹಾಗೂ ನ್ಯಾಯಾಲಯದಿಂದ ಅಡ್ಡಿಪಡಿಸುವ ಸಾಧ್ಯತೆ ಇದೆ ಎಂಬ ಆತಂಕ ನೌಕರರಲ್ಲಿದೆ. ಹೀಗಾಗಿ ಈ ಬಾರಿ ಕಾರ್ಮಿಕ ಇಲಾಖೆಗೆ ಮುಷ್ಕರ ನೋಟಿಸ್ ನೀಡದೆ, ದಿನಾಂಕ ನಿಗದಿಪಡಿಸದೇ, ಹಠಾತ್ ಸೇವೆ ಸ್ಥಗಿತಗೊಳಿಸುವ ತಂತ್ರ ರೂಪಿಸಲಾಗಿದೆ. ವಾಟ್ಸಾಪ್ ಸೇರಿದಂತೆ ಆಂತರಿಕ ಸಂವಹನ ಮಾಧ್ಯಮಗಳ ಮೂಲಕ ರಾತ್ರೋರಾತ್ರಿ ಸಂದೇಶ ಕಳುಹಿಸಿ, ಏಕಾಏಕಿ ಬಸ್ ಸಂಚಾರ ನಿಲ್ಲಿಸುವ ಪ್ಲಾನ್ ಮಾಡಲಾಗಿದೆ ಎನ್ನಲಾಗಿದೆ.

## ಅವತಾರ್ ಅಮ್ಯೂಸ್ ಮೆಂಟ್ ಪಾರ್ಕ್ ಮತ್ತು ವಸ್ತುಪ್ರದರ್ಶನ ಆಯೋಜನೆ



ಪೀಣ್ಯ ಎರಡನೇ ಹಂತದ ಕ್ರಿಕೆಟ್ ಆಟದ ಮೈದಾನದಲ್ಲಿ ಶ್ರೀ ಗುರು ಎಂಟರ್ಪ್ರೈಸಸ್ ವತಿಯಿಂದ ಒಂದು ತಿಂಗಳವರೆಗೂ ನೆಡೆಯಲಿರುವ ಅವತಾರ್ ಅಮ್ಯೂಸ್ ಮೆಂಟ್ ಪಾರ್ಕ್ ಮತ್ತು ವಸ್ತು ಪ್ರದರ್ಶನವನ್ನು ಕುಣಿಗಲ್ ಶಾಸಕ ಡಾ. ರಂಗನಾಥ್ ಹಾಗು ಅರ್ ಅರ್ ನಗರ ಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ಕುಸುಮಾ ಹನುಮಂ ತರಾಯಪ್ಪ ಉದ್ಘಾಟಿಸಿದರು.

ಈ ವೇಳೆ ಮಾತಾನಡಿದ ಶಾದಕ ಡಾ.ರಂಗನಾಥ್ ಅವತಾರ್ ಅವತರಿಣಿಕೆಯ ಅಮ್ಯೂಸ್ ಮೆಂಟ್ ಎಲ್ಲರ ಗಮನ ಸೆಳೆಯುತ್ತಿದ್ದು ಒಂದು ವಿಶಿಷ್ಟ ವಿಶೇಷವಾಗಿದೆ ,ಎಲ್ಲಾ ವಯಮಾನದವರಿಗೂ ಅವತಾರ್ ನ ಪ್ರದರ್ಶನ ನೋಡುಗರನ್ನು ಸೆಳೆಯುವು ದರಲ್ಲಿ ಸಂಶಯವಿಲ್ಲ ಉತ್ತಮ ತಾಂತ್ರಕತೆಯನ್ನು ಬಳಸಿ ಬಹಳ ಚೆನ್ನಾಗಿ ರೂಪಿಸಿದ್ದಾರೆ ನಿಜವಾಗಿಯೂ ಬೇರೆ ಪ್ರಪಂಚದಲ್ಲಿ ಇದ್ದಿವಿ ಅನ್ನುವಷ್ಟು ಮಟ್ಟಿಗೆ ಇಲ್ಲಿ ಅವತಾರ್ ಅಕೃತಿಗಳನ್ನು ಅಳವಡಿಸಿದ್ದಾರೆ ಎಂದರು.

ಅರ್ ಅರ್ ನಗರ ಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ಕುಸುಮಾ ಹನುಮಂತರಾಯಪ್ಪ ಮಾತಾನಾಡಿ ಮೊದಲು ಸಿನಿಮಾದಲ್ಲಿ ಅವತಾರ್ ನೋಡಿದ್ದವೆ. ಇಲ್ಲಿ ನೋಡಿದಾಗ ಯಾವುದೊ ಗ್ರಹಗಳಲ್ಲಿ ಈ ಏಲಿಯನ್ಸ್ ವಾಸ ಮಾಡುತ್ತಿದ್ದವೇನೋ ಎಂಬಂತೆ ಭಾಸವಾಗುತ್ತಿದ್ದು ನೋಡುಗರಿಗೆ ಒಂದು ವಿಶೇಷ ಅನುಭವವಾಗುತ್ತಿದೆ ಜೊತೆಗೆ ಒಂದಷ್ಟು ಕಲಾ ವಸ್ತುಗಳ ಪ್ರದರ್ಶನ, ರಾಟೆ ಮಕ್ಕಳಿಗೆ ಆಟಗಳು ಒಟ್ಟಿನಲ್ಲಿ ಈ ಅಮ್ಯೂಸ್ ಮೆಂಟ್ ಪಾರ್ಕ್ನಲ್ಲಿ ಒಳ್ಳೆಯ ಉತ್ತಮ ಮನೋರಂಜನೆ ಇಲ್ಲಿಗೆ ಬರುವ ಪ್ರತಿಯೊಬ್ಬರಿಗೂ ಸಿಗಲಿದೆ ಅದ್ದರಿಂದ ಕುಟುಂಬ ಸಮೇತ ಇಲ್ಲಿಗೆ ಆಗಮಿಸಿ ಕಣ್ತುಂಬಿಕೊಳ್ಳಿ ಎಂದರು.

ಉದ್ಘಾಟನಾ ಕಾರ್ಯಕ್ರಮದಲ್ಲಿ ರಾಜರಾಜೇಶ್ವರಿನಗರ. ವಿ ಕ್ಷೇತ್ರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಡಾ.ರಾಂಪುರ ನಾಗೇಶ್, ರಾಜ್ಯ, ರಾಷ್ಟ್ರೀಯ,ಅಂತರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಡಾ.ಸಂಗನಬಸಪ್ಪ ಬಿರಾದಾರ್, ಹೆಗ್ಗನಹಳ್ಳಿ ಕಾಂಗ್ರೆಸ್ ಮುಖಂಡರಾದ ಬ.ನಾ.ರವಿ, ಜಂಟಿ ಕಾರ್ಯದರ್ಶಿ ಎಂಕೆ , ಅಯೋಜ ಕ ರಾದ ರಂಗಸ್ವಾಮಿ, ನಾಗೇಶ್ ಟಿ ಅರ್, ರಂಗನಾಥ್ ಎಸ್ ,ಚಿಕ್ಕಮುದಗೆರೆ ಗ್ರಾಮ ಪಂಚಾಯತಿ ಅಧ್ಯಕ್ಷರು ಮಾಗಡಿ ತಾ ಹಾಗೂ ಪತ್ರಕರ್ತರಾದ ನಂದೀಶ್ ,ಲೋಕೇಶ್ ಗೌಡ ಮತ್ತಿತರ ಗಣ್ಯರು ಭಾಗವಹಿಸಿದ್ದರು

## ಗ್ಯಾರಂಟಿ ಯೋಜನೆಯ ಹೊಡೆತ: ಕೃಷಿಯಿಂದ ದೂರ ಸರಿದ ಮಹಿಳೆಯರು, ಸಂಕಷ್ಟದಲ್ಲಿರುವ ರೈತರು

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚಗ್ಯಾರಂಟಿ ಯೋಜನೆಗಳು ಮಹಿಳೆಯರ ಆರ್ಥಿಕ ಸಬಲೀಕರಣದ ದೃಷ್ಟಿಯಿಂದ ಮಹತ್ವದ ಹೆಜ್ಜೆಯಾಗಿವೆ. ವಿಶೇಷವಾಗಿ ಮಹಿಳೆಯರಿಗೆ ಉಚಿತ ಬಸ್ ಸೌಲಭ್ಯ, ಗೃಹಲಕ್ಷ್ಮಿ ಯೋಜನೆ, ಉಚಿತ ಆಹಾರ ಧಾನ್ಯಗಳಂತಹ ಯೋಜನೆಗಳು ಗ್ರಾಮೀಣ ಮಹಿಳೆಯರ ಜೀವನದಲ್ಲಿ ಭದ್ರತೆ ತಂದಿರುವುದು ನಿಜ. ಆದರೆ, ಇದರ ಪರಿಣಾಮವಾಗಿ ಕೃಷಿ ಕಾರ್ಯ ಮಾಡಲು ಕಾರ್ಮಿಕರಿಲ್ಲದೇ ಕೃಷಿ ವಲಯ ತತ್ತರಿಸಿ ಹೋಗಿದೆ. ಉಚಿತ ಬಸ್ ಸೇವೆ ಆರಂಭವಾದ ಬಳಿಕ ಗ್ರಾಮೀಣ ಭಾಗದ ದುಡಿಯುವ ವರ್ಗದ ಮಹಿಳೆಯರು ಕೃಷಿ ಕೆಲಸಗಳಿಗೆ ಗುಡ್‌ಬೈ ಹೇಳಿ ಪಟ್ಟಣ-ನಗರಗಳತ್ತ ಮುಖ ಮಾಡಿದ್ದಾರೆ. ಬೆಳಗಿನ ಬಸ್‌ಗಳಲ್ಲಿ ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸುತ್ತಿರುವುದು ಸಾಮಾನ್ಯವಾಗಿದೆ. ಮನೆಗೆಲಸ, ಬಟ್ಟೆ ಅಂಗಡಿ, ಹೋಟೆಲ್, ಮದುವೆ ಮತ್ತು ಕೆಟರಿಂಗ್ ಕೆಲಸಗಳು ಸೇರಿದಂತೆ ನಗರ ಪ್ರದೇಶಗಳಲ್ಲಿ ಲಭ್ಯವಿರುವ ಉದ್ಯೋಗಗಳು ಮಹಿಳೆಯರನ್ನು ಹೆಚ್ಚು ಆಕರ್ಷಿಸುತ್ತಿವೆ.

ಬೆಳಗ್ಗೆ ನಗರಕ್ಕೆ ತೆರಳಿ ಸಂಜೆ ಮನೆಗೆ ಮರಳುವ ಮಹಿಳೆಯರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಬಿಸಿಲಿನಲ್ಲಿ ಗಂಟೆಗಟ್ಟಲೆ ದುಡಿಯಬೇಕು, ದೈಹಿಕ ಶ್ರಮ ಅಧಿಕ, ಆದರೆ ಸಿಗುವ ಕೂಲಿ ಕಡಿಮೆ. ಅದಕ್ಕೆ ಹೋಲಿಸಿದರೆ ನಗರ ಉದ್ಯೋಗಗಳು ಕಡಿಮೆ ಶ್ರಮ, ಸಮಯವೂ ನಿಗದಿತವಾಗಿದ್ದು, ಕೂಲಿ ಉತ್ತಮವಾಗಿದೆ. ಹಿಂದೆ ಬಸ್ ಪ್ರಯಾಣಕ್ಕೆ ಅರ್ಧ ಸಂಬಳವೇ ಖರ್ಚಾಗುತ್ತಿದ್ದ




ಕಾರಣ ನಗರ ಕೆಲಸಕ್ಕೆ ಹೋಗಲು ಹಿಂದೇಟು ಹಾಕುತ್ತಿದ್ದ ಮಹಿಳೆಯರು, ಈಗ ಉಚಿತ ಬಸ್ ಸೌಲಭ್ಯದಿಂದ ಸಿಗುವ ಸಂಪೂರ್ಣ ಕೂಲಿಯನ್ನು ಉಳಿಸಿಕೊಳ್ಳುತ್ತಿದ್ದಾರೆ. ಹೀಗಾಗಿ ಕೃಷಿ ವಲಯದಲ್ಲಿ ಕಾರ್ಮಿಕರ ಕೊರತೆ ತೀವ್ರವಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಬಿತ್ತನೆ, ಕಳೆ ತೆಗೆಯುವುದು, ಕೊಯ್ಲು ಕಾರ್ಯಗಳಿಗೆ ಕೂಲಿ ಕಾರ್ಮಿಕರು ಸಿಗದೆ ರೈತರು ಕಂಗಾಲಾಗಿದ್ದಾರೆ. ಕೆಲವೆಡೆ ಸಾವಿರಾರು ರೂಪಾಯಿ ವೆಚ್ಚ ಮಾಡಿ ಬೆಳೆದ ಬೆಳೆ, ಕಾರ್ಮಿಕರ ಕೊರತೆಯಿಂದ ಗದ್ದೆಯಲ್ಲೇ ನಾಶವಾಗುತ್ತಿದೆ. "ಊರೆಲ್ಲ ಹುಡುಕಿದರೂ ಈಗ ಕೃಷಿ ಕೆಲಸಕ್ಕೆ ಮಹಿಳೆಯರು ಸಿಗುತ್ತಿಲ್ಲ" ಎಂಬುದು ರೈತರಿಗೆ ಸಮಸ್ಯೆಯಾಗಿದೆ.

ಕೃಷಿ ಕುಟುಂಬಗಳಲ್ಲಿ ನಾಲ್ಕೈದು ಜನ ದುಡಿಯುವವರು ಇದ್ದರೆ ಮಾತ್ರ ಕೃಷಿ ಮುಂದುವರಿಸಲು ಸಾಧ್ಯ. ಆದರೆ, ಹೆಚ್ಚಿನ ಕುಟುಂಬಗಳಲ್ಲಿ ಯುವಕರು ಮತ್ತು ಮಹಿಳೆಯರು ನಗರ ಉದ್ಯೋಗಗಳತ್ತ ಹೋಗಿರುವುದರಿಂದ, ಒಬ್ಬಂಟಿಯಾಗಿ ಕೃಷಿ ನಡೆಸುವ ಪರಿಸ್ಥಿತಿ ಎದುರಾಗಿದೆ. ವಿಶೇಷವಾಗಿ ಮಧ್ಯಮ ಮತ್ತು ದೊಡ್ಡ ಜಮೀನು ಹೊಂದಿರುವ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಕೆಲ ರೈತರು ಪರಸ್ಪರ ಸಹಕಾರದ ಮೂಲಕ ಕೃಷಿ ಕಾರ್ಯ ಮುಂದುವರಿಸಲು ಪ್ರಯತ್ನಿಸುತ್ತಿದ್ದಾರೆ. ಎರಡು-ಮೂರು ಕುಟುಂಬಗಳು ಸೇರಿ ಕೆಲಸ ಹಂಚಿಕೊಂಡು ಕೃಷಿ ನಡೆಸುತ್ತಿರುವ ಉದಾಹರಣೆಗಳೂ ಇವೆ. ಆದರೆ, ಇದು ಸಣ್ಣ ಜಮೀನಿಗೆ ಮಾತ್ರ ಸಾಧ್ಯವಾಗಿದ್ದು, ಹೆಚ್ಚಿನ ಜಮೀನು ಹೊಂದಿರುವವರಿಗೆ ಈ ವಿಧಾನ ಸಾಕಾಗುತ್ತಿಲ್ಲ ಇದಕ್ಕೆ ಮತ್ತೊಂದು ಪ್ರಮುಖ ಕಾರಣ ಎಂದರೆ, ಈಗ ದುಡಿಯದೇ ಇದ್ದರೂ ಬದುಕು ಸಾಗುವ ವ್ಯವಸ್ಥೆ ರೂಪುಗೊಂಡಿರುವುದು.

ಬಹುತೇಕ ದುಡಿಯುವ ವರ್ಗದ ಕುಟುಂಬಗಳಿಗೆ ಬಿಪಿಎಲ್ ಕಾರ್ಡ್ ಮೂಲಕ ಉಚಿತ ಅಕ್ಕಿ ಸಿಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಡಿ ತಿಂಗಳಿಗೆ 2000 ರೂ. ದೊರೆಯುತ್ತಿದೆ. ಕುಟುಂಬದಲ್ಲಿ ಹಿರಿಯರು, ಅಂಗವಿಕಲರು ಇದ್ದರೆ ಸಂಧ್ಯಾ ಸುರಕ್ಷಾ ಅಥವಾ ಪಿಂಚಣಿ ಯೋಜನೆಯ ಲಾಭವೂ ಲಭ್ಯ. ಹೀಗಾಗಿ "ದುಡಿದರೆ ಮಾತ್ರ ಹೊಟ್ಟೆ ತುಂಬುತ್ತದೆ" ಎಂಬ ಹಳೆಯ ಕಾಲದ ನಿಯಮ ಈಗ ನಿಧಾನವಾಗಿ ಮಂಕಾಗುತ್ತಿದೆ. ಒಟ್ಟಿನಲ್ಲಿ, ಪಂಚಗ್ಯಾರಂಟಿ ಯೋಜನೆಗಳು ಸಾಮಾಜಿಕ ಭದ್ರತೆ ಒದಗಿಸಿದರೂ, ಕೃಷಿ ವಲಯದ ಮೇಲೆ ಅದರ ಪರಿಣಾಮವನ್ನು ಗಂಭೀರವಾಗಿ ಪರಿಗಣಿಸುವ ಅಗತ್ಯವಿದೆ. ಇಲ್ಲದಿದ್ದರೆ, ಕಾರ್ಮಿಕರ ಕೊರತೆಯಿಂದ ಕೃಷಿಯೇ ಸಂಕಷ್ಟಕ್ಕೆ ಸಿಲುಕುವ ಅಪಾಯವಿದೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

## ನಟಿ ಶಿಲ್ಪಾ ಶೆಟ್ಟಿ ಒಡೆತನದ ಬ್ಯಾಸ್ಟಿನ್ ಪಬ್ ವಿರುದ್ಧ FIR



**ಬೆಂಗಳೂರು:** ಬಾಲಿವುಡ್ ನಟಿ ಶಿಲ್ಪಾ ಶೆಟ್ಟಿ ಅವರ ಒಡೆತನದ ಪಬ್‌ಗೆ ಮತ್ತೆ ಸಂಕಷ್ಟ ಎದುರಾಗಿದೆ. ನಗರದ ಪೊಲೀಸರು ನಟಿ ಶಿಲ್ಪಾ ಶೆಟ್ಟಿ ಮಾಲೀಕತ್ವದ ಬ್ಯಾಸ್ಟಿನ್ ಪಬ್ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ನಿಗದಿತ ಅವಧಿ ಮೀರಿ ಅನಧಿಕೃತವಾಗಿ ಪಬ್ ಮತ್ತು ರೆಸ್ಟೋರೆಂಟ್‌ಗಳನ್ನು ತೆರೆದು ಗ್ರಾಹಕರಿಗೆ ಅವಕಾಶ ಮಾಡಿಕೊಟ್ಟ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಬೆಂಗಳೂರಿನ ಹೃದಯಭಾಗದಲ್ಲಿರುವ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ. ಪೊಲೀಸರು 103 ಕೆ.ಪಿ. ಆಕ್ಟ್ (ಕರ್ನಾಟಕ ಪೊಲೀಸ್ ಕಾಯ್ದೆ) ಅಡಿಯಲ್ಲಿ ಸುಮೊಟೊ ದೂರು ದಾಖಲಿಸಿ ಎಫ್‌ಐಆರ್ ನೊಂದಾಯಿಸಿದ್ದಾರೆ. ಶಿಲ್ಪಾ ಶೆಟ್ಟಿ ಒಡೆತನದ ಬ್ಯಾಸ್ಟಿನ್ ಪಬ್ ಬೆಂಗಳೂರಿನ ಸೆಂಟ್ ಮಾರ್ಕ್ಸ್ ರಸ್ತೆಯಲ್ಲಿದ್ದು, ಬ್ಯಾಸ್ಟಿನ್ ಪಬ್‌ನ ಜೊತೆಗೆ, ರೆಸಿಡೆನ್ಸಿ ರಸ್ತೆಯಲ್ಲಿರುವ ಸೋರ್ ಬ್ಯಾರಿ ಪಬ್ ವಿರುದ್ಧವೂ ಅದೇ ನಿಯಮ ಉಲ್ಲಂಘನೆಗಾಗಿ ಪ್ರಕರಣ ದಾಖಲಾಗಿದೆ.

ಕಬ್ಬನ್ ಪಾರ್ಕ್ ಠಾಣೆ ಪೊಲೀಸರು ಅವಧಿ ಮೀರಿ ಗ್ರಾಹಕರಿಗೆ ಅವಕಾಶ ಮಾಡಿಕೊಟ್ಟು ನಿಯಮ ಉಲ್ಲಂಘಿಸಿದ ಈ ಎರಡೂ ಪಬ್‌ಗಳ ಮ್ಯಾನೇಜರ್ ಮತ್ತು ಸಿಬ್ಬಂದಿ ವಿರುದ್ಧ ಪ್ರತ್ಯೇಕ ಕೇಸ್‌ಗಳನ್ನು ದಾಖಲಿಸಿದ್ದಾರೆ. ಈ ಮೂಲಕ ನಗರದಲ್ಲಿ ರಾತ್ರಿ ವೇಳೆ ನಿಗದಿತ ಸಮಯದ ನಂತರ ಅನಧಿಕೃತವಾಗಿ ಕಾರ್ಯನಿರ್ವಹಿಸುವ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಂಡಿದ್ದಾರೆ ಬ್ಯಾಸ್ಟಿನ್ ಪಬ್ ವಿವಾದಕ್ಕೆ ಸಿಲುಕುತ್ತಿರುವುದು ಇದೇ ಮೊದಲಲ್ಲ. ಕೆಲ ದಿನಗಳ ಹಿಂದಷ್ಟೇ ಈ ಪಬ್‌ನಲ್ಲಿ ದೊಡ್ಡ ಗಲಾಟೆಯೊಂದು ನಡೆದಿತ್ತು. ಉದ್ಯಮಿ ಸತ್ಯ ನಾಯ್ಡು ಮತ್ತು ಪಬ್‌ನ ಸಿಬ್ಬಂದಿ ನಡುವೆ ವಾಗ್ವಾದ ನಡೆದು, ಅದು ತಾರಕಕ್ಕೇರಿತ್ತು. ಪಬ್‌ನ ಬೌನ್ಸರ್‌ಗಳು ಜಗಳವನ್ನು ತಡೆಯಲು ಪ್ರಯತ್ನಿಸಿದರೂ ವಾಗ್ವಾದ ನಿಂತಿರಲಿಲ್ಲ.

ಈ ಗಲಾಟೆಯ ವಿಡಿಯೋ ಕೂಡ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಘಟನೆ ನಡೆದ ಬಳಿಕ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಕಲೆಹಾಕಿದ್ದರು. ಈ ಘಟನೆ ನಡೆದ ಬೆನ್ನಲ್ಲೇ ಇದೀಗ ಅವಧಿ ಉಲ್ಲಂಘನೆ ಆರೋಪದ ಮೇಲೆ ಎಫ್‌ಐಆರ್ ದಾಖಲಾಗಿರುವುದು ಶಿಲ್ಪಾ ಶೆಟ್ಟಿ ಅವರ ಪಬ್‌ಗೆ ಮತ್ತಷ್ಟು ಸಂಕಷ್ಟ ತಂದಿದೆ. ಪಬ್‌ಗಳು ಮತ್ತು ರೆಸ್ಟೋರೆಂಟ್‌ಗಳು ನಿಗದಿತ ಸಮಯದ

ನಂತರ ಕಾರ್ಯನಿರ್ವಹಿಸುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತದೆ ಮತ್ತು ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗುತ್ತದೆ ಎಂಬ ಕಾರಣಕ್ಕೆ ಪೊಲೀಸರು ನಿಯಮ ಉಲ್ಲಂಘನೆಯ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದಾರೆ. ಪ್ರಸ್ತುತ ಎಫ್‌ಐಆರ್ ದಾಖಲಾಗಿರುವ ಹಿನ್ನೆಲೆಯಲ್ಲಿ ಪೊಲೀಸರು ಮುಂದಿನ ದಿನಗಳಲ್ಲಿ ಪಬ್‌ನ ಪರವಾನಿಗೆ ಮತ್ತು ಕಾರ್ಯವೈಖರಿ ಕುರಿತು ಮತ್ತಷ್ಟು ತನಿಖೆ ನಡೆಸುವ ಸಾಧ್ಯತೆ ಇದೆ.

## ರೈಲಿನ ಚೈನ್ ಎಳೆದು ಪುಂಡಾಟ: ಪ್ರಶ್ನಿಸಿದ RPF ಸಿಬ್ಬಂದಿ ಮೇಲೆ ಹ ಲ್ಲೆ



**ಬೆಂಗಳೂರ:**ರಾಜಧಾನಿ ಬೆಂಗಳೂರಿನಿಂದ ಗೋವಾಕ್ಕೆ ಹೊರಟಿದ್ದ ರೈಲಿನಲ್ಲಿ ಕುಡಿದ ಮತ್ತಿನಲ್ಲಿದ್ದ ಮೂವರು ಪ್ರಯಾಣಿಕರು ಕರ್ತವ್ಯ ನಿರತ ರೈಲ್ವೆ ಸಂರಕ್ಷಣಾ ಪಡೆಯ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ ಘಟನೆ ನಡೆದಿದೆ. ಈ ಸಂಬಂಧ ಮೂವರು ಆರೋಪಿಗಳನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಬೆಂಗಳೂರಿನ ಯಶವಂತಪುರ ರೈಲ್ವೆ ನಿಲ್ದಾಣದಿಂದ ಯಶವಂತಪುರ-ವಾಸ್ಕೋಡಗಾಮ ರೈಲು ಗೋವಾ ಕಡೆಗೆ ಹೊರಟಿತ್ತು. ಈ ಸಂದರ್ಭದಲ್ಲಿ, ರೈಲಿನಲ್ಲಿದ್ದ ಮೂವರು ವ್ಯಕ್ತಿಗಳು ಕಾರಣವಿಲ್ಲದೆ ರೈಲಿನ ಚೈನ್ ಎಳೆದು ರೈಲನ್ನು ನಿಲ್ಲಿಸಿದರು. ಇದನ್ನು ಗಮನಿಸಿದ ರೈಲ್ವೆ ಸಂರಕ್ಷಣಾ ಪಡೆಯ ಸಿಬ್ಬಂದಿಯೊಬ್ಬರು ತಕ್ಷಣ ಸ್ಥಳಕ್ಕೆ ಧಾವಿಸಿ, ಇದರ ಬಗ್ಗೆ ಪ್ರಶ್ನೆ ಮಾಡಿದರು. ಆಗ ಕುಡಿದ ಮತ್ತಿನಲ್ಲಿದ್ದ ಆ ಪುಂಡರು ಉದ್ಧಟತನ ಪ್ರದರ್ಶಿಸಿದರು. ಪ್ರಶ್ನೆ ಮಾಡಿದ ಸಿಬ್ಬಂದಿಯನ್ನು ತಳ್ಳಿ, ಅವರ ಮೇಲೆ ಹಲ್ಲೆ ಮಾಡಲು ಪ್ರಯತ್ನಿಸಿದ್ದಾರೆ. ಪರಿಸ್ಥಿತಿ ವಿಕೋಪಕ್ಕೆ ಹೋಗುತ್ತಿದ್ದಂತೆಯೇ, ಆರ್‌ಪಿಎಫ್ ಸಿಬ್ಬಂದಿ ಕೂಡಲೇ ಹೆಚ್ಚಿನ ಸಹ ಸಿಬ್ಬಂದಿಗೆ ಮಾಹಿತಿ ನೀಡಿದರು. ಹೆ ಚ್ಚು ವ ರಿ ಆರ್‌ಪಿಎಫ್ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ, ಗಲಾಟೆ ಮಾಡುತ್ತಿದ್ದ ಕಿಡಿಗೇಡಿಗಳನ್ನು ತಕ್ಷಣವೇ ವಶಕ್ಕೆ ಪಡೆದರು. ಈ ಘಟನೆಯ ಕುರಿತು ಆರ್.ಪಿ.ಎಫ್ ಸಿಬ್ಬಂದಿಯು ಯಶವಂತಪುರ ರೈಲ್ವೆ ಠಾಣೆಯಲ್ಲಿ ಆರೋಪಿಗಳ ವಿರುದ್ಧ ದೂರು ನೀಡಿದ್ದಾರೆ. ರೈಲ್ವೆ ಪೊಲೀಸರು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಪುಂಡಾಟಿಕೆ ನಡೆಸಿದ ಮೂವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಈ ಆರೋಪಿಗಳ ಮೇಲೆ ಪ್ರಮುಖವಾಗಿ, ರೈಲಿನ ಚೈನ್ ಎಳೆದು ಪ್ರಯಾಣಕ್ಕೆ ಅಡ್ಡಿಪಡಿಸುವುದು, ರೈಲ್ವೆ ಪೊಲೀಸರ ಮೇಲೆ ಹಲ್ಲೆ ನಡೆಸುವುದು ಮತ್ತು ಕರ್ತವ್ಯಕ್ಕೆ ಅಡ್ಡಿಪಡಿಸುವುದು ಮುಂತಾದ ಗಂಭೀರ ಆರೋಪಗಳನ್ನು ಹೊರಿಸಲಾಗಿದೆ.ಘಟನೆಯ ನಂತರ, ರೈಲ್ವೆ ಪೊಲೀಸರು ಆರೋಪಿಗಳನ್ನು ಬಂಧಿಸಿ, ಮುಂದಿನ ಕಾನೂನು ಕ್ರಮಕ್ಕಾಗಿ ತಮ್ಮ ವಶಕ್ಕೆ ತೆಗೆದುಕೊಂಡಿದ್ದಾರೆ.

ಈ ಮೂವರು ಪುಂಡರ ಗಲಾಟೆ ಮತ್ತು ನಂತರದ ಪೊಲೀಸರ ಕಾರ್ಯಾಚರಣೆಯಿಂದಾಗಿ ಯಶವಂತಪುರ-ವಾಸ್ಕೋಡಗಾಮ ರೈಲಿನ ಪ್ರಯಾಣದಲ್ಲಿ ಸ್ವಲ್ಪ ವಿಳಂಬವಾಯಿತು. ನಿಗದಿತ ಸಮಯಕ್ಕಿಂತ ತಡವಾಗಿ ರೈಲು ಗೋವಾ ಕಡೆಗೆ ಪ್ರಯಾಣ ಮುಂದುವರೆಸಿತು. ಪ್ರಯಾಣಿಕರು ಸಹ ಪುಂಡರ ಈ ಕೃತ್ಯದಿಂದಾಗಿ ತೊಂದರೆ ಅನುಭವಿಸಬೇಕಾಯಿತು.ಸಾರ್ವಜನಿಕ ಸಾರಿಗೆಯಲ್ಲಿ ಪ್ರಯಾಣ ಮಾಡುವಾಗ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವುದು ಪ್ರತಿಯೊಬ್ಬ ಪ್ರಯಾಣಿಕರ ಕರ್ತವ್ಯ. ಆರೋಪಿಗಳ ವಿರುದ್ಧ ಶೀಘ್ರವೇ ಕಠಿಣ ಕ್ರಮ ತೆಗೆದುಕೊಳ್ಳುವುದಾಗಿ ಪೊಲೀಸರು ತಿಳಿಸಿದ್ದಾರೆ.

## ಹೈಕಮಾಂಡ್ ಹೇಳೋವರೆಗೂ ನಾನೇ ಮುಖ್ಯಮಂತ್ರಿ: ಸದನದಲ್ಲಿ ಸಿದ್ದರಾಮಯ್ಯ ಪುನರುಚ್ಚಾರ

**ಬೆಳಗಾವಿ**:ಸಿಎಂ ಬದಲಾವಣೆ, ಐದು ವರ್ಷ ಅಧಿಕಾರ ಬಗ್ಗೆ ಸದನದಲ್ಲಿ ಸ್ವಾರಸ್ಯಕರ ಚರ್ಚೆ ನಡೆದಿದೆ. ನೀವೇ ಐದು ವರ್ಷ ಸಿಎಂ ಆಗಿರ್ತೀರಾ ಸರ್ ಎಂಬ ಆರ್. ಅಶೋಕ್ ಅವರ ಪ್ರಶ್ನೆಗೆ, ಹೈಕಮಾಂಡ್ ಹೇಳೋವರೆಗೂ ನಾನೇ ಮುಖ್ಯಮಂತ್ರಿ ಎಂದು ಸಿದ್ದರಾಮಯ್ಯ ಉತ್ತರಿಸಿದ್ದಾರೆ. ಕೃಷಿಪತ್ತಿನ ಸಹಕಾರ ಸಂಘಗಳಿಗೆ ಷೇರು ಧನ ಕೊಡುವ ವಿಚಾರದಲ್ಲಿ ತಾರತಮ್ಯ ಆಗಿದೆ ಎಂದು ಸದನದಲ್ಲಿ ಕುಣಿಗಲ್ ರಂಗನಾಥ್ ಪ್ರಶ್ನಿಸಿದ್ದರು. ರಂಗನಾಥ್ ಪ್ರಶ್ನೆಗೆ ಉತ್ತರ ಕೊಡ್ತಿದ್ದ ಸಿಎಂ, ರಂಗನಾಥ್ ನಮ್ಮ ಮೇಲೆ ವಿಶ್ವಾಸ ಇಡಿ. ತಾರತಮ್ಯ ಆಗಿದ್ರೆ ನಿಮ್ಮ ಸಮಸ್ಯೆ ಬಗೆಹರಿಸ್ತೇವೆ ಎಂದರು. ಈ ವೇಳೆ ಅಶೋಕ್ ಮಧ್ಯಪ್ರವೇಶಿಸಿ, ತಾರತಮ್ಯ ಬೇಕು ಅಂತ ಮಾಡಿದ್ದಾರೆ ಅಂದ್ರು. ಅದಕ್ಕೆ ಸಿಎಂ, ನೀವು ಉರಿಯುತ್ತಿರುವ ಬೆಂಕಿಗೆ ತುಪ್ಪ ಹಾಕಬೇಡ ಎಂದರು.

ಹಾಗಾದ್ರೆ ಉರಿಯುತ್ತಿದೆಯಾ ನಿಮ್ಮಲ್ಲಿ ಅಂತ ಅಶೋಕ್ ಕೆಣಕಿದರು. ಅದು ಗಾದೆ ಕಣಯ್ಯ ಅಂತ ಸಿಎಂ ಸ್ಪಷ್ಟನೆ ಕೊಟ್ಟರು. ಈ ವೇಳೆ ಅಶೋಕ್ ಮಾತನಾಡಿ, ಕುಣಿಗಲ್ ರಂಗನಾಥ್ ಅವರು ಡಿಕೆಶಿ ಸಿಎಂ ಆಗೋದಕ್ಕೆ ಪೂಜೆ, ಪುನಸ್ಕಾರ ಮಾಡ್ತಿದ್ದಾರೆ ಎಂದರು. ರಂಗನಾಥ್ ಮಾತನಾಡಿ, ಪೂಜೆ ಪುನಸ್ಕಾರ ಮಾಡ್ತಿರೋದು ನಮ್ಮ ಕ್ಷೇತ್ರಕ್ಕಾಗಿ ಎಂದರು. ಸಿಎಂ ಉರಿಯುತ್ತಿರೋದಕ್ಕೆ ತುಪ್ಪ ಹಾಕಬೇಡ ಅಂದ್ರು, ಅಲ್ಲಿಗೆ ಜಗಳ ಹೊತ್ತಿ ಉರೀತಿದೆ ಅಂತ ಅರ್ಥ ಎಂದು ಅಶೋಕ್ ಟಾಂಗ್ ಕೊಟ್ಟರು. ಗಾದೆ ಅದು, ನಿಮಗೆ ಗಾದೆ ಗೊತ್ತಿಲ್ಲ ಅಂದ್ರೆ ಏನ್ಮಾಡೋದು ಅಂತ ಸಿಎಂ ಸ್ಪಷ್ಟಪಡಿಸಿದರು. ಇನ್ನೊಂದ್ಸಲ ಗಾದೆ ಹೇಳಿ ಸರ್ ಅಂತ ಅಶೋಕ್ ಕಿಚಾಯಿಸಿದರು. ಆಂ, ಇನ್ನೊಂದ್ಸಲ ಹೇಳಲಾ? ಉರಿಯುತ್ತಿರುವ ಬೆಂಕಿಗೆ ತುಪ್ಪ ಹಾಕಬೇಡಿ, ವಿಪಕ್ಷ ಇರೋದೇ ಉಪ್ಪು ಹಾಕೋದಿಕ್ಕೆ ಅಂತ ಸಿಎಂ ಮತ್ತೆ ಹೇಳಿದರು. ನಾವು ಉಪ್ಪು ಹಾಕ್ತಿಲ್ಲ, ಅವರೇ ಹಾಕ್ತಿದ್ದಾರೆ ಎಂದರು ಅಶೋಕ್. ರಂಗನಾಥ್ ಅವರು ಸುಮ್ಮನೆ ಇದ್ದಾರೆ, ನೀವ್ಯಾಕೆ ಸುಮ್ಮನಿರಲ್ಲ ಅಂತ ಸಿಎಂ ಪ್ರಶ್ನಿಸಿದರು. ಅವರು ಸುಮ್ಮನೆ ಇರಲ್ಲ ಸರ್, ಬಹಳ ಸಲ ಕೇಳಿದೆ, ಪೂಜೆ ವ್ರತ ಮಾಡ್ತಿದೀನಿ ಡಿಕೆಶಿ ಒಂದ್ಸಲ ಸಿಎಂ ಆಗೋದು ಕನಸು ಅಂದ್ರು ಅಂತ ಅಶೋಕ್ ಮಾತನಾಡಿದರು. ವಿಪಕ್ಷದವ್ರು ನೀವು ಏನೇ ಪ್ರಚೋದನೆ, ಕಿತಾಪತಿ ಮಾಡಿದ್ರೂ ನಮ್ಮಲ್ಲಿ ಯಾರೂ ಪ್ರಚೋದನೆ ಆಗಲ್ಲ ಅಂತ ಸಿಎಂ ತಿರುಗೇಟು ಕೊಟ್ಟರು ನೀವೇ ಐದು ವರ್ಷ ಸಿಎಂ ಆಗಿರ್ತೀರಾ ಸರ್ ಅಂತ ಅಶೋಕ್ ಪ್ರಶ್ನಿಸಿದರು. ಅದನ್ನ ನೀನ್ಯಾಕೆ ಕೇಳ್ತೀಯಾ? ಐದು ವರ್ಷ ಇರಿ ಅಂತ ಜನ ಆಶೀರ್ವಾದ ಮಾಡಿದ್ದಾರೆ, ನಾವೇ ಐದು ವರ್ಷ ಇರ್ತೇವೆ ಅಂತ ಸಿಎಂ ಹೇಳಿದರು. ನಾವು ಎದುರು ಮನೆಯವ್ರು, ಸರ್, ಕೇಳ್ತೀವಿ, ನೀವು ಐದು ವರ್ಷ ಇರೋದು ಗ್ಯಾರಂಟಿನಾ ಸರ್ ಎಂದು ಅಶೋಕ್ ಮತ್ತೆ ಪ್ರಶ್ನಿಸಿದರು.



ಈ ವೇಳೆ ಮಧ್ಯಪ್ರವೇಶಿಸಿದ ಪರಮೇಶ್ವರ್, ಜನ ಐದು ವರ್ಷ ಆಡಳಿತ ಮಾಡಿ ಅಂತ ಆಶೀರ್ವಾದ ಮಾಡಿದ್ದಾರೆ. ಐದು ವರ್ಷ ನಾವು ಇರ್ತೀವಿ ಅಂದಮೇಲೆ ನಿಮಗೇಕೆ ಅನುಮಾನ ಎಂದು ಹೇಳಿದರು. ಪರಮೇಶ್ವರ್ ಅವರೊಬ್ಬರೇ ಸರ್, ನಾನು ನೋಡಿದ ಹಾಗೆ ಅವರು ಯಾವಾಗಲೂ ನಿಮ್ಮ ಜತೆ ನಿಂತಿದ್ದಾರೆ ಸರ್, ಏನಾದರೂ ಅವಕಾಶ ಆದರೆ ಬ್ಲ್ಯಾಕ್ ಹಾರಿಸ್ತಾರೆ ಎಂದು ಅಶೋಕ್ ಟಾಂಗ್ ಕೊಟ್ಟರು. 140 ಶಾಸಕರು ನಮ್ ಜತೆ ಇದ್ದಾರೆ, ಜನ ಐದು ವರ್ಷಕ್ಕೆ ಆಶೀರ್ವಾದ ಮಾಡಿದ್ದಾರೆ. 2028 ಕ್ಕೂ ನಾವೇ ಬರ್ತೇವೆ. ಬಿಜೆಪಿಯನ್ನು ಜನ ಯಾವತ್ತೂ ಅಧಿಕಾರಕ್ಕೆ ತರಲ್ಲ. ಜನರ ಆಶೀರ್ವಾದ ಪಡ್ಕೊಂಡು ಬಂದಿದ್ದೀರಾ ನೀವು? ಆಪರೇಷನ್ ಕಮಲ ಮಾಡಿ ಹಿಂಬಾಗಿಲ ಮೂಲಕ ಬಂದಿದ್ದೀರ, ಜನ ನಿಮಗೆ ಆಶೀರ್ವಾದ ಮಾಡಲ್ಲ ಅಂತ ಸಿಎಂ ಟಾಂಗ್ ಕೊಟ್ಟರು. 2018 ರಲ್ಲಿ ಜನ ನಿಮಗೂ ಆಶೀರ್ವಾದ ಮಾಡಿರ್ಲಿಲ್ಲ. ಜೆಡಿಎಸ್ ಜತೆ ಸೇರಿ ಸರ್ಕಾರ ಮಾಡಿದ್ರಲ್ಲ, ಅವರ ಮನೆ ಬಾಗಿಲಿಗೆ ಹೋಗಿದ್ರಲ್ಲ ಅಂತ ಅಶೋಕ್ ತಿರುಗೇಟು ಕೊಟ್ಟರು.

ನಾವು ಅವರ ಮನೆ ಬಾಗಿಲಿಗೆ ಹೋಗಿರಲಿಲ್ಲ. ಬಿಜೆಪಿ ಬರಬಾರದು ಅಂತ ಅವರೇ ಬಂದಿದ್ರು, ನೀವ್ಯಾಕೆ ಅವರ ಜತೆ ಹೋಗಿದ್ದೀರಿ ಅಂತ ಸಿಎಂ ಮರುಪ್ರಶ್ನೆ ಹಾಕಿದರು. ನೀವ್ಯಾಕೆ ಜೆಡಿಎಸ್ ಜತೆ ಹೋದ್ರಿ ಅಂತ ಬಿಜೆಪಿ ಸಿಎಂ ಪ್ರಶ್ನಿಸಿದಾಗ ಪ್ರಿಯಾಂಕ್ ಖರ್ಗೆ ಎದ್ದುನಿಂತು ಬೆಂಬಲ ಸೂಚಿಸಿದರು. ಆಗ ಅಶೋಕ್ ಬೆಂಬಲಕ್ಕೆ ಅರವಿಂದ್ ಬೆಲ್ಲದ್, ಸುನಿಲ್ ಕುಮಾರ್ ಬಂದರು. ಸಿಎಂ ಮಾತನಾಡಿ, ನಿಮ್ಮಲ್ಲಿ ಅಧ್ಯಕ್ಷ ಸ್ಥಾನಕ್ಕೆ ಯಾಕೆ ಕಚ್ಚಾಟ? ನಾವು ಹೈಕಮಾಂಡ್ ಹೇಳಿದಂಗೆ ಕೇಳ್ತೀವಿ, ಜನ ಆಶೀರ್ವಾದ ಮಾಡಿದ್ದಾರೆ ನಮಗೆ, ಜನ ಖುಷಿ ಆಗಿದ್ದಾರೆ, ನಿಮಗೆ ಅಸೂಯೆ, ಹೊಟ್ಟೆ ಕಿಚ್ಚು. ನಾವು ಐದು ವರ್ಷ ತುಂಬಿಸ್ತೇವೆ, ಮುಂದೆಯೂ ನಾವೇ ಗೆದ್ದು ಬರ್ತೇವೆ, ಮತ್ತೆ ನಾವೇ ಅಧಿಕಾರ ಮಾಡ್ತೇವೆ ಎಂದರು. ಸಿಎಂ ಮಾತಿಗೆ ಇತರೆ ಸದಸ್ಯರು ಮೇಜು ಕುಟ್ಟಿದರು. ಸದನದಲ್ಲಿ ಟಕ್ಕರ್ ಪ್ರತಿ ಟಕ್ಕರ್ಸಿ ಎಂ ಸ್ಥಾನದ ಗೊಂದಲ ಬಗ್ಗೆ ಬಿಜೆಪಿ ಆರೋಪಗಳಿಗೆ ಸದನದಲ್ಲಿ ಸಿಎಂ ಸ್ಪಷ್ಟನೆ ನೀಡಿದರು. ನಮ್ಮಲ್ಲಿ ಹೈಕಮಾಂಡ್ ಇದೆ, ಹೈಕಮಾಂಡ್ ಏನು ತೀರ್ಮಾನ ಮಾಡ್ತಾರೋ ಅದರಂತೆ ಕೇಳ್ತೇವೆ. ಜನ ನಮಗೆ ಆಶೀರ್ವಾದ ಮಾಡಿದ್ದಾರೆ, ಬಿಜೆಪಿವರಿಗೆ ಜನ ಆಶೀರ್ವಾದ ಮಾಡಲ್ಲ, ಇವರು ವಿಪಕ್ಷ ಸ್ಥಾನದಲ್ಲಿ ಶಾಶ್ವತವಾಗಿ ಇರ್ತಾರೆ ಅಂತ ಸಿಎಂ ಟಾಂಗ್ ಕೊಟ್ಟರು ಯತ್ನಾಳ್ ಮಾತನಾಡಿ, ಐದು ವರ್ಷ ಸಿಎಂ ಯಾರು ಅನ್ನೋದಷ್ಟೇ ಪ್ರಶ್ನೆ. ಸಿದ್ದರಾಮಯ್ಯ ಇರ್ತಾರೋ ಬೇರೆಯವ್ರು ಬರ್ತಾರೋ ಎಂದು ಪ್ರಶ್ನಿಸಿದರು.

ಸುರೇಶ್ ಕುಮಾರ್ ಮಾತನಾಡಿ, ಇಷ್ಟು ದಿನ ಸಿಎಂ ನಾನೇ ಮುಂದುವರೀತೇನೆ ಅಂತಿದ್ರು. ಈಗ ಏಕವಚನದಿಂದ ಬಹುವಚನಕ್ಕೆ ಬಂದಿದ್ದಾರೆ. ನಾನು ಅನ್ನೋ ಕಡೆ ನಾವು ಅಂತಿದ್ದಾರೆ. ಪ್ರಾಯಶಹಃ ಕನಕದಾಸರು ಹೇಳಿದ್ದ ನಾನು ಹೋದಲ್ಲಿ ಮಾತ್ರ ಹೋಗುತ್ತೇನೆ ಅನ್ನೋದನ್ನು ಅನುಷ್ಠಾನಕ್ಕೆ ತಂದಿದ್ದಾರೆ ಎಂದು ಕಾಲೆಳೆದರು. ಸಿಎಂ ಪ್ರತಿಕ್ರಿಯಿಸಿ, ನಾನು ಹೋದರೆ ಹೋದೇನು... ಇದು ಕನಕದಾಸರು ಹೇಳಿರೋದು. ಕನಕದಾಸರಿಗೂ ನನಗೂ ಹೋಲಿಕೆ ಮಾಡಬೇಡಿ. ನಾವು ಸರ್ಕಾರದಲ್ಲಿ. ಇದು ಬಹುವಚನ. ನಾನೇ ಮುಖ್ಯಮಂತ್ರಿ, ಈಗಲೂ ಮುಖ್ಯಮಂತ್ರಿ ಎಂದರು. ಸುನಿಲ್ ಕುಮಾರ್ ಎದ್ದುನಿಂತು, ನಾನೇ ಮುಂದಿನ ಐದು ವರ್ಷ ಸಿಎಂ ಅಂದಿದ್ರರಲ್ಲ ನೀವು ಈಗೇನಂತೀರಿ ಎಂದು ಪ್ರಶ್ನಿಸಿದರು. ಸಿಎಂ ಪ್ರತಿಕ್ರಿಯಿಸಿ, ನೀವ್ಯಾಕೆ ಮೂರು ಜನ ಸಿಎಂ ಮಾಡಿದ್ರಿ? ಈಗಲೂ ನಾನೇ ಮುಖ್ಯಮಂತ್ರಿ, ಈಗಲೂ ನಾನೇ ಮುಖ್ಯಮಂತ್ರಿ, ಮುಂದೇನೂ ಮುಖ್ಯಮಂತ್ರಿ. ಹೈಕಮಾಂಡ್ ಹೇಳುವವರೆಗೂ ನಾನೇ ಮುಖ್ಯಮಂತ್ರಿ ಎಂದು ಸಿಎಂ ಉತ್ತರ ಕೊಟ್ಟರು. ನೀವು ಯಾಕ್ರಿ ಮೂರು ಮೂರು ಸಿಎಂ ಬದಲಾಯಿಸಿದ್ರಿ ಎಂದು ಬಿಜೆಪಿಗೆ ತಿರುಗೇಟು ನೀಡಿದರು.

## ಸುತ್ತೂರು ಜಾತ್ರಾ ಮಹೋತ್ಸವ; ರಾಷ್ಟ್ರಪತಿ ದ್ರೌಪತಿ ಮುರ್ಮು ಭೇಟಿ



**ಮಳವಳ್ಳಿ**: ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣ ಇತಿಹಾಸದಲ್ಲೇ ಮೊದಲ ಬಾರಿಗೆ ರಾಷ್ಟ್ರಪತಿಯನ್ನು ಸ್ವಾಗತಿಸಲು ಸಜ್ಜಾಗಿದೆ. ಸುತ್ತೂರು ಮಠದ ಶಿವರಾತ್ರೀಶ್ವರ ಶಿವಯೋಗಿಗಳ 1066ನೇ ಜಯಂತ್ಯುತ್ಸವದ ಮಹತ್ವದ ಕಾರ್ಯಕ್ರಮಕ್ಕೆ ಮಂಗಳವಾರ (ಡಿ.17) ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಆಗಮಿಸಲಿದ್ದಾರೆ. ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಹಾಗೂ ಮಳವಳ್ಳಿ ಶಾಸಕ ಪಿ.ಎಂ. ನರೇಂದ್ರಸ್ವಾಮಿ, "ಮಳವಳ್ಳಿಗೆ ಇದೇ ಮೊದಲ ಬಾರಿಗೆ ರಾಷ್ಟ್ರಪತಿ ಆಗಮಿಸುತ್ತಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯ. ರಾಷ್ಟ್ರಪತಿ ಅವರನ್ನು ಅದ್ಧೂರಿಯಾಗಿ ಸ್ವಾಗತಿಸಲು ಸಕಲ ಸಿದ್ಧತೆಗಳನ್ನು ಮಾಡಲಾಗಿದೆ" ಎಂದು ತಿಳಿಸಿದರು. ಮಂಗಳವಾರ ಮಧ್ಯಾಹ್ನ 3.15 ಗಂಟೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸುತ್ತೂರು ಮಠದ ಶಿವರಾತ್ರೀಶ್ವರ ಶಿವಯೋಗಿಗಳ 1066ನೇ ಜಯಂತ್ಯುತ್ಸವವನ್ನು ಅಧಿಕೃತವಾಗಿ ಉದ್ಘಾಟಿಸಲಿದ್ದಾರೆ.

ಈ ಮಹತ್ವದ ಸಮಾರಂಭಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಧ್ಯಕ್ಷತೆ ವಹಿಸಲಿದ್ದಾರೆ. ರಾಜ್ಯ ಸಚಿವ ಎನ್. ಚಲುವರಾಯಸ್ವಾಮಿ ಸೇರಿದಂತೆ ಹಲವು ಗಣ್ಯರು, ಸಾಧುಸಂತರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ನರೇಂದ್ರಸ್ವಾಮಿ ಮಾಹಿತಿ ನೀಡಿದರು. ಸುತ್ತೂರು ಮಠದ ಜಯಂತ್ಯುತ್ಸವವು ಐದು ದಿನಗಳ ಕಾಲ ವೈಭವದಿಂದ ನಡೆಯಲಿದ್ದು, ನಾಟಕ ಪ್ರದರ್ಶನ, ಉಪನ್ಯಾಸ ಮಾಲಿಕೆ, ವಾದ್ಯಗೋಷ್ಠಿ, ಸಂಗೀತ ಸಂಜೆ, ವಚನ ನೃತ್ಯರೂಪಕ ಸೇರಿದಂತೆ ವಿವಿಧ ಸಾಂಸ್ಕೃತಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಆಯೋಜಿಸಲಾಗಿದೆ. ಇದೇ ವೇಳೆ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಮಾತನಾಡಿ, ರಾಷ್ಟ್ರಪತಿ ಅವರ ಆಗಮನ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಸಂಪೂರ್ಣ ಸಿದ್ಧತೆಯಲ್ಲಿದೆ ಎಂದು ತಿಳಿಸಿದರು.

ಮಾರೇಹಳ್ಳಿ ಬಳಿ ಹೆಲಿಪ್ಯಾಡ್ ವ್ಯವಸ್ಥೆ ಮಾಡಲಾಗಿದ್ದು, ಮೂರು ಹೆಲಿಕಾಪ್ಟರ್‌ಗಳ ಲ್ಯಾಂಡಿಂಗ್‌ಗೆ ಅಗತ್ಯ ಜಾಗ ಗುರುತಿಸಲಾಗಿದೆ ಎಂದು ಹೇಳಿದರು. ಭದ್ರತಾ ವ್ಯವಸ್ಥೆಯ ಕುರಿತು ಮಾಹಿತಿ ನೀಡಿದ ಅವರು, ರಾಷ್ಟ್ರಪತಿ ಭೇಟಿಯ ಹಿನ್ನೆಲೆಯಲ್ಲಿ ಇಬ್ಬರು ಎಸ್‌ಪಿ, ನಾಲ್ವರು ಡಿವೈಎಸ್‌ಪಿ ಸೇರಿದಂತೆ 1000ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ನಗರದಲ್ಲಿ ವಾಹನ ಸಂಚಾರ ನಿಯಂತ್ರಣ, ಸಾರ್ವಜನಿಕರ ಸುರಕ್ಷತೆ ಹಾಗೂ ಕಾರ್ಯಕ್ರಮ ಸುಗಮವಾಗಿ ನಡೆಯುವಂತೆ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ರಾಷ್ಟ್ರಪತಿ ಆಗಮನದ ಹಿನ್ನೆಲೆಯಲ್ಲಿ ಮಳವಳ್ಳಿ ಪಟ್ಟಣದಲ್ಲಿ ಸ್ವಚ್ಛತೆ, ರಸ್ತೆ ಅಲಂಕಾರ, ವಿದ್ಯುತ್ ದೀಪಾಲಂಕಾರ ಸೇರಿದಂತೆ ಹಲವು ಸಿದ್ಧತೆಗಳನ್ನು ಮಾಡಲಾಗಿದ್ದು,

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.